ಸಂಪುಟ : 9 ಸಂಚಿಕೆ 293 ಪುಟ : 4+2 ಬೆಲೆ: 3.00 ಶುಕ್ರವಾರ ಜನವರಿ 3 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...


VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 293 Pages : 4+2 Price : 3.00 Friday January 3 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಜನವರಿ 3 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.

ಜನವರಿ 3 ರಂದು ಬೆಳಿಗ್ಗೆ 9 ಗಂಟೆಗೆ ಧಾರವಾಡದಿಂದ ರಸ್ತೆ ಮೂಲಕ ಹೊರಟು ಬೆ. 10.30 ಗಂಟೆಗೆ ಗದಗಿಗೆ ಆಗಮಿಸುವರು. ಬೆಳಿಗ್ಗೆ 10.30 ಗಂಟೆಗೆ ನಾಗಾವಿಯ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಆಡಿಟೋರಿಯಂನಲ್ಲಿ 39ನೇ ವಾರ್ಷಿಕ ರಾಷ್ಟ್ರೀಯ ಸಂಶೋಧನಾ ಸಮ್ಮೇಳನದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 1 ಗಂಟೆಗೆ ಗದಗಿನಿಂದ ರಸ್ತೆ ಮೂಲಕ ಧಾರವಾಡಕ್ಕೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ (ಮುನ್ಸಿಪಾಲಿಟಿ) ಯೋಜನೆ ಹಂತ –4 ಶೇ 5 % ಯೋಜನೆಯ ಅಂಗವಿಕಲರ ವಿಕಲಚೇತನರ ಫಲಾನುಭವಿಗಳಿಗೆ ಗದಗ ನಗರಸಭೆ ವ್ಯಾಪ್ತಿಗೆ ಬರುವ ಅನುದಾನದಡಿ ವಿಕಲಚೇತನರ ಕ್ಷೇಮಾಭಿವೃದ್ಧಿ ಘಟಕದಡಿಯಲ್ಲಿ ವೈಯಕ್ತಿಕ ಕಾರ್ಯಕ್ರಮಗಳ ಅನುಷ್ಠಾನ ಸಂಬಂಧಿಸಿದಂತೆ ವಿಕಲಚೇತನ ಸ್ನೇಹಿ ಸ್ಕೂಟರ್ ಖರೀದಿಸಿ ಪೂರೈಸಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜನವರಿ 31 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಗದಗ-ಬೆಟಗೇರಿ ನಗರಸಭೆಯ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

## ಗದಗ–ಬೆಟಗೇರಿಗೆ ಇಂದೂ ನೀರಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರಕ್ಕೆ ಸಗಟು ನೀರು ಸರಬರಾಜು ಮಾಡುವ ಹಮ್ಮಗಿ ಜ್ಯಾಕ್‌ವೆಲ್‌ದಿಂದ ಡಂಬಳ ಮಧ್ಯಂತರ ಪಂಪಿಂಗ್ ಸ್ಟೇಷನ್‌ಗೆ ಬರುವ ಸಿಂಗಟಾಲೂರ ಹಿಂಭಾಗದಲ್ಲಿ ಮುಖ್ಯ ಕೊಳವೆ ಮಾರ್ಗಗಳ ದುರಸ್ತಿ ಕಾರ್ಯವನ್ನು ಯುದ್ಧೋಪಾದಿಯಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಸದರ ದುರಸ್ತಿ ಕಾರ್ಯ ಪೂರ್ಣಗೊಳ್ಳುವವರೆಗೂ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುವುದರಿಂದ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಲು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೆಯುಐಡಿಎಫ್‌ಸಿ ಕೇಂದ್ರ ಕಛೇರಿಯಿಂದ ಕಾನೂನು ಅರಿವು ತರಬೇತಿ ಕಾರ್ಯಕ್ರಮ

# ಪ್ರತಿಯೊಬ್ಬರಿಗೂ ಕಾನೂನು ಅರಿವು ಅಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ಕೇಂದ್ರ ಕಛೇರಿಯು ಕರ್ನಾಟಕ ನಗರ ನೀರು ಸರಬರಾಜು ಆಧುನೀಕರಣ ಯೋಜನೆಯ ಹುಬ್ಬಳ್ಳಿ ಯೋಜನಾ ಅನುಷ್ಠಾನ ಘಟಕದಲ್ಲಿ ಸಾಮರ್ಥ್ಯ ಅಭಿವೃದ್ಧಿ ಭಾಗವಾಗಿ ಕಾನೂನು ಅರಿವು ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.



ಕೆಯುಐಡಿಎಫ್‌ಸಿ ವ್ಯವಸ್ಥಾಪಕ ನಿರ್ದೇಶಕ ಶರತ ಬಿ. ವರ್ಚುವಲ್ ಕಾನ್ಫರೆನ್ಸ್ ಮೂಲಕ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಕೆಯುಐಡಿಎಫ್‌ಸಿ ತರಬೇತಿ ಕಾರ್ಯಕ್ರಮದ ಸದುಪಯೋಗವನ್ನು ಪಡೆದುಕೊಳ್ಳಲು ಕರೆ ನೀಡಿದರು.

ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಪ್ರತಿಯೊಬ್ಬರಿಗೂ ಕಾನೂನು ಅರಿವು ಅಗತ್ಯವಾಗಿದೆ. ಅದರಲ್ಲೂ ಅಭಿವೃದ್ಧಿ ಕಾರ್ಯಗಳನ್ನು ಮಾಡುತ್ತಿರುವ ಅಧಿಕಾರಿಗಳು ಅಗತ್ಯ ಕಾನೂನುಗಳ ಮಾಹಿತಿಯನ್ನು ಹೊಂದಿದರೆ, ಉತ್ತಮ ಸೇವೆಯನ್ನು ಒದಗಿಸಲು ಸಾಧ್ಯವಾಗುತ್ತದೆ. ಕೆಯುಐಡಿಎಫ್‌ಸಿ ವತಿಯಿಂದ ಹಮ್ಮಿಕೊಂಡ ತರಬೇತಿಯು ಅತಿ ಮುಖ್ಯ ಹಾಗೂ ಅಗತ್ಯವಾಗಿದ್ದು, ಕಾನೂನಿಗೆ ಸಂಬಂಧಿಸಿದ ವಿವಿಧ ಅಧಿವೇಶನಗಳಿದ್ದು ತರಬೇತಿಯ ಪ್ರಯೋಜನವನ್ನು ಪಡೆಯಲು ಕರೆ ನೀಡಿದರು.

ಕೆಯುಐಡಿಎಫ್‌ಸಿ ಕೇಂದ್ರ ಕಛೇರಿಯ ಉಪ ಪ್ರಧಾನ ವ್ಯವಸ್ಥಾಪಕರಾದ (ತರಬೇತಿ ಮತ್ತು ಸಾಮರ್ಥ್ಯ ಅಭಿವೃದ್ಧಿ) ಡಾ. ಪೂರ್ಣಿಮಾ ಎಂ.ಆರ್. ಕಾರ್ಯಾಗಾರವನ್ನು ಹಮ್ಮಿಕೊಂಡ ಉದ್ದೇಶ, ರೂಪುರೇಷೆಗಳು ಹಾಗೂ ಕಾರ್ಯಾಗಾರದಲ್ಲಿ ನಡೆಯುವ ವಿವಿಧ ಅಧಿವೇಶನಗಳ ಮಾಹಿತಿಯನ್ನು ನೀಡಿ, ಶಿಬಿರಾರ್ಥಿಗಳು ಕಾರ್ಯಾಗಾರದ ಸಂಪೂರ್ಣ ಉಪಯೋಗವನ್ನು ಪಡೆದುಕೊಳ್ಳಲು ಹಾಗೂ ಪ್ರತಿ ಶಿಬಿರಾರ್ಥಿ ಪರಸ್ಪರ ಸಮಾಲೋಚನೆ ಮೂಲಕ ಅವರಿಗೆ ಉದ್ಭವಿಸಿದ ಅನುಮಾನಗಳನ್ನು ಪರಿಹರಿಸುವಲ್ಲಿ ಯಶಸ್ವಿಯಾಗಿ ಚರ್ಚಿಸುವ ಮೂಲಕ ಸಕ್ರಿಯವಾಗಿ ಭಾಗವಹಿಸಬೇಕು ಎಂದರು.

ತರಬೇತಿ ಕಾರ್ಯಕ್ರಮದ ಸಂಪನ್ಮೂಲ ಅಧಿಕಾರಿಗಳಾದ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯವಾದಿಗಳಾದ ಗುರುದೇವ ಗಚ್ಚಿನಮಠ ವ್ಯಾಜ್ಯಗಳಿಲ್ಲದ ಪರಿಣಾಮಕಾರಿ ಕಛೇರಿ ನಿರ್ವಹಣೆ, ಉದ್ಯೋಗದ ನೀತಿಗಳು, ಕಾರ್ಯವಿಧಾನ ಇತ್ಯಾದಿಗಳ ಕುರಿತು ಮಾಹಿತಿ ನೀಡಿದರು.

ಕೆಯುಐಡಿಎಫ್‌ಸಿಯ ಸಹಾಯಕ ವ್ಯವಸ್ಥಾಪಕರಾದ ದಾಕ್ಷಾಯಣಿ ನಡೂರಮಠ ಪ್ರಾಧಿಕಾರದ ದಾವೆಗಳ ಮೂಲಭೂತ ಜ್ಞಾನ, ಪ್ರಕರಣಗಳ ಸ್ವರೂಪ, ನ್ಯಾಯಲಯದ ಪ್ರಕರಣಗಳ ನಿರ್ವಹಣೆ, ಮಾಹಿತಿ ಹಕ್ಕು ಅರ್ಜಿಗಳ ನಿರ್ವಹಣೆ ಇತ್ಯಾದಿಗಳ ಕುರಿತು ಮಾಹಿತಿ ಒದಗಿಸಿದರು.


ಕುಸ್ನೆಂಪ್ ಯೋಜನಾ ಅನುಷ್ಠಾನ ಘಟಕದ ಹೆಚ್.ಎನ್. ಮಂಜುನಾಥ, ಅಧೀಕ್ಷಕ ಇಂಜಿನಿಯರ್ ಹಾಗೂ ಅಧಿಕಾರಿಗಳು ತರಬೇತಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

### ಮಹಿಳಾ ಮುಖ್ಯ ಶಿಕ್ಷಕರಿಗೆ ಕಾನೂನಾತ್ಮಕ ರಕ್ಷಣೆ ಒದಗಿಸುವಲ್ಲಿ ಅಧಿಕಾರಿಗಳು ವಿಫಲ

# ಮುಖ್ಯಮಂತ್ರಿಗಳಿಗೆ ಬಸವರಾಜ ಹೊರಟ್ಟಿ ಪತ್ರ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಸರಕಾರಿ ಪ್ರೌಢಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಮುಖ್ಯ ಶಿಕ್ಷಕರಿಗೆ ಸೂಕ್ತ ಕಾನೂನಾತ್ಮಕ, ಸಂವಿಧಾನಾತ್ಮಕ ರಕ್ಷಣೆ ಒದಗಿಸುವ ವಿಷಯದಲ್ಲಿ ಅಧಿಕಾರಿಗಳು ವಿಳಂಬ ಧೋರಣೆ ಅನುಸರಿಸುತ್ತಿರುವುದು ವಿಷಾದನೀಯ ಎಂದು ಸಭಾಪತಿ ಬಸವರಾಜ ಹೊರಟ್ಟಿಯವರು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರ ಬರೆದು ಕಟ್ಟುನಿಟ್ಟಿನ ಕ್ರಮಕೈಗೊಳ್ಳವಂತೆ ಒತ್ತಾಯಿಸಿದ್ದಾರೆ.



ಸರಕಾರಿ ಪ್ರೌಢಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಮುಖ್ಯ ಶಿಕ್ಷಕರುಗಳಿಗೆ 2024–25ನೇ ಸಾಲಿನ ಶೈಕ್ಷಣಿಕ ಅವಧಿಯಲ್ಲಿ ಅಹಿತಕರ ಘಟನೆಗಳ ಪ್ರಕರಣಗಳು ಹೆಚ್ಚಾಗಿವೆ ಎಂದು ಈ ಬಗ್ಗೆ ರಾಜ್ಯ ಮಹಿಳಾ ಮುಖ್ಯ ಶಿಕ್ಷಕರ ಒಕ್ಕೂಟದಿಂದ ರಾಷ್ಟ್ರೀಯ ಮಹಿಳಾ ದೌರ್ಜನ್ಯ ನಿಯಂತ್ರಣ ದಳದಿಂದ ಹಾಗೂ ಸಮೂಹ ಮಾಧ್ಯಮಗಳಿಂದ ವರದಿಗಳು ಸ್ವೀಕೃತಗೊಂಡಿರುತ್ತವೆ. ಸದರಿ ಪ್ರಕರಣಗಳ ಬಗ್ಗೆ ಮಹಿಳಾ ಮುಖ್ಯಶಿಕ್ಷಕರಿಗೆ ಸೂಕ್ತ ಕಾನೂನಾತ್ಮಕ ಸಂವಿಧಾನಾತ್ಮಕ ರಕ್ಷಣೆ ಒದಗಿಸುವ ನಿಟ್ಟಿನಲ್ಲಿ ಮುಖ್ಯ ಶಿಕ್ಷಕರಿಗೆ ಸೂಕ್ತ ರಕ್ಷಣೆ ಮತ್ತು ಸೇವಾ ಭದ್ರತೆಯನ್ನು ಒದಗಿಸುವಂತೆ ಮುಖ್ಯ ಕಾರ್ಯದರ್ಶಿಗಳು, ರಾಷ್ಟ್ರೀಯ ಶಿಕ್ಷಣ ಆಡಳಿತ ಸುಧಾರಣೆ ಮತ್ತು ತನಿಖಾ ಪ್ರಾದೇಶಿಕ ದಳ ಬೆಂಗಳೂರು ಇವರು ಆಯುಕ್ತರು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಕರ್ನಾಟಕ ಸರಕಾರ ಬೆಂಗಳೂರು ಇವರಿಗೆ ಪತ್ರ ಬರೆದಿದ್ದಾರೆ. ಅವರು ಬರೆದ ಪತ್ರದ ಸಾರಾಂಶ ನೋಡಿದಾಗ ಅತ್ಯಂತ ಕಳವಳ ಎನಿಸುತ್ತದೆ.

ಶಾಲಾ ಮುಖ್ಯಸ್ಥರು ಇಲಾಖಾ ಆದೇಶದಂತೆ ಸಭೆಯ ತರಬೇತಿ ಇತರೆ ಕೆಲಸಗಳಲ್ಲಿ ತೆರಳಿದಾಗ ಹತ್ತು ವರ್ಷ ಅನುಭವವಿರುವ, ನಂಬಿಕೆಗೆ ಅರ್ಹವಿರುವ ಶಾಲಾ ಶೈಕ್ಷಣಿಕ ಆಡಳಿತ ಚಟುವಟಿಕೆಗಳನ್ನು ನಿರ್ವಹಿಸಲು ಅರ್ಹರಿರುವ ಯಾವುದೇ ಸಹ ಶಿಕ್ಷಕರಿಗೆ ಪ್ರಭಾರ ನೀಡುವಂತೆ ಮಾಡುವುದು ತುರ್ತು ಅಗತ್ಯವಿದೆ.


ಇಂತಹ ಅಹಿತಕರ ಘಟನೆಗಳು ರಾಜ್ಯದ, ದೇಶದ ಸಂವಿಧಾನದ ಹಿತಾಸಕ್ತಿಗೆ ಧಕ್ಕೆ ತರುತ್ತಿದೆ. ಇನ್ನುಮುಂದೆ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಮುಖ್ಯ ಶಿಕ್ಷಕರಿಗೆ ಸೂಕ್ತ ರಕ್ಷಣೆ ಮತ್ತು ಸೇವಾ ಭದ್ರತೆಯನ್ನು ಒದಗಿಸುವಂತೆ ಸಭಾಪತಿ ಬಸವರಾಜ ಹೊರಟ್ಟಿಯವರು ಮುಖ್ಯಮಂತ್ರಿಗಳನ್ನು ಕೋರಿದ್ದಾರೆ.

ಅಲ್ಲದೇ ಕೆಲವು ಶಾಲೆಗಳಲ್ಲಿ ಕೆಲವು ಸಹ ಶಿಕ್ಷಕರು, ಬೋಧಕೇತರ ಸಿಬ್ಬಂದಿಗಳು ಮುಖ್ಯ ಶಿಕ್ಷಕರ ಸರ್ಕಾರಿ ಆದೇಶ ಪಾಲನೆ ಮಾಡುತ್ತಿಲ್ಲ. ಗ್ರಾಮದ ತಾಲೂಕಿನ ಕೆಲವು ಕಿಡಿಗೇಡಿ ವ್ಯಕ್ತಿಗಳ ಸಂಪರ್ಕದಿಂದ ಮುಖ್ಯ ಶಿಕ್ಷಕರಿಗೆ ಸುಳ್ಳು ಮೂಕರ್ಜಿಗಳನ್ನು ಉನ್ನತ ಅಧಿಕಾರಿಗಳ ಕಛೇರಿಗೆ ಬರೆದು ಮುಖ್ಯ ಶಿಕ್ಷಕರ ಘನತೆ ಗೌರವಕ್ಕೆ ಧಕ್ಕೆ ತರುವುದು, ಮಾನಸಿಕ ಕಿರುಕುಳ ನೀಡುವುದು, ಕೊಲೆ ಬೆದರಿಕೆ ಹಾಕುವುದು ಕಂಡುಬಂದಿದೆ ಎಂದು ಬಸವರಾಜ ಹೊರಟ್ಟಿ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

## ಕೇಂದ್ರ ಸಚಿವರಿಗೆ ಧನ್ಯವಾದ ಅರ್ಪಿಸಿದ ಸಂಸದ ಬೊಮ್ಮಾಯಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಹುದಿನಗಳ ಬೇಡಿಕೆ ಯಾಗಿದ್ದ ವಿಜಯಪುರ – ಮಂಗಳೂರು ರೈಲು ಯಲವಿಗಿ ರೈಲ್ವೆ ನಿಲ್ದಾಣದಲ್ಲಿ ನಿಲುಗಡೆಗೆ ಅವಕಾಶ ಮಾಡಿರುವದಕ್ಕೆ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ ರೈಲ್ವೆ ಇಲಾಖೆಗೆ ಧನ್ಯವಾದ ತಿಳಿಸಿದ್ದಾರೆ. ವಿಜಯಪುರ – ಮಂಗಳೂರು ನಡುವೆ ಸಂಚರಿಸುವ ಮಂಗಳೂರು ಎಕ್ಸ್‌ಪ್ರೆಸ್ ರೈಲನ್ನು ಯಲವಿಗಿ ರೈಲು ನಿಲ್ದಾಣದಲ್ಲಿ ನಿಲುಗಡೆ ಮಾಡಲು ಅವಕಾಶ ಕಲ್ಪಿಸಿರುವ ಕೇಂದ್ರ ರೈಲ್ವೆ ಸಚಿವರು ಹಾಗೂ ಅಧಿಕಾರಿಗಳಿಗೆ ಸಂಸದರು ಅಭಿನಂದಿಸಿ ಸಾಮಾಜಿಕ ಜಾಲತಾಣದಲ್ಲಿ ಧನ್ಯವಾದ ಅರ್ಪಿಸಿರುವ ಅವರು, ವಿಜಯಪುರ – ಮಂಗಳೂರು ರೈಲಿನ ಮೂಲಕ ಸಂಚರಿಸುವ ಪ್ರಯಾಣಿಕರಿಗೆ ಯಲವಿಗಿ ರೈಲು ನಿಲ್ದಾಣದಲ್ಲಿ ನಿಲುಗಡೆಗೆ ಅವಕಾಶ ಕಲ್ಪಿಸಿರುವುದರಿಂದ ರಾಜ್ಯದ ಪ್ರಮುಖ ದೇವಸ್ಥಾನಗಳಾದ ಶ್ರೀ ಕುಕ್ಕೆ ಸುಬ್ರಮಣ್ಯ, ಧರ್ಮಸ್ಥಳ ಕ್ಷೇತ್ರಗಳಿಗೆ ಭೇಟಿ ನೀಡಲು ಅನುಕೂಲವಾಗಲಿದೆ ಹಾಗೂ ಬಂದರು ನಗರಿ ಮಂಗಳೂರು ನಗರಕ್ಕೆ ಈ ರೈಲು ನೇರ ಸಂಪರ್ಕವನ್ನು ಒದಗಿಸಲಿದ್ದು, ಇದರ ಸದುಪಯೋಗವನ್ನು ಪಡೆಯಬೇಕೆಂದು ಜನತೆಗೆ ಮನವಿ ಮಾಡಿದ್ದಾರೆ.




ಯಲವಿಗಿ ರೈಲು ನಿಲ್ದಾಣದಲ್ಲಿ ವಿಜಯಪುರ – ಮಂಗಳೂರು ಎಕ್ಸ್‌ಪ್ರೆಸ್ ರೈಲು ಪ್ರತಿದಿನ ರಾತ್ರಿ 9:49 ಗಂಟೆಗೆ ನಿಲುಗಡೆಯಾಗಲಿದೆ ಎಂದು ತಿಳಿಸಿದ್ದಾರೆ.

### ಕ.ರಾ.ಗ್ರಾ.ಪಂ.ರಾ.ವಿ.ವಿ ವತಿಯಿಂದ 2 ದಿನಗಳ ಕಾರ್ಯಕ್ರಮ ಇಂದು ಉದ್ಘಾಟನೆ

# 39ನೇ ವಾರ್ಷಿಕ ರಾಷ್ಟ್ರೀಯ ಸಂಶೋಧನಾ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಗದಗ, ಭಾರತೀಯ ಸಹಕಾರ ಅಧ್ಯಯನ ಸಂಸ್ಥೆ ಪುಣೆ, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ ಬೆಂಗಳೂರು ಮತ್ತು ವೈಕುಂಟ್ ಮೆಹ್ತಾ ರಾಷ್ಟ್ರೀಯ ಸಹಕಾರ ನಿರ್ವಹಣೆ ಸಂಸ್ಥೆ, ಪುಣೆ ಇವರ ಸಹಯೋಗದಲ್ಲಿ ಗದುಗಿನ ನಾಗಾವಿಯ ಕ.ರಾ.ಗ್ರಾ.ಪಂ. ರಾ.ವಿ.ವಿ.ದ ಆಡಿಟೋರಿಯಂ ಹಾಲ್‌ನಲ್ಲಿ ಜ. 3 ಮತ್ತು 4ರಂದು ಎರಡು ದಿನಗಳ 39ನೇ ವಾರ್ಷಿಕ ರಾಷ್ಟ್ರೀಯ ಸಂಶೋಧನಾ ಸಮ್ಮೇಳನವನ್ನು 'ಸ್ಥಿತಿಸ್ಥಾಪಕತ್ವ ಮತ್ತು ಸುಸ್ಥಿರತೆಗಾಗಿ ಸಹಕಾರ ವ್ಯವಹಾರ ಮಾದರಿ' ಎಂಬ ವಿಷಯದ ಮೇಲೆ ಆಯೋಜಿಸಲಾಗಿದೆ.



ಜ.3ರಂದು ಬೆಳಿಗ್ಗೆ 10.30 ಗಂಟೆಗೆ ಸಂಶೋಧನಾ ಸಮ್ಮೇಳನದ ಉದ್ಘಾಟನೆ ಜರುಗಲಿದ್ದು, ರಾಜ್ಯದ ಕಾನೂನು, ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನೆ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಸಹಕಾರಿ ಸಚಿವರಾದ ಕೆ.ಎನ್. ರಾಜಣ್ಣ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಮತ್ತು ಐ.ಟಿ–ಬಿ.ಟಿ. ಸಚಿವರು ಹಾಗೂ ಕ.ರಾ.ಗ್ರಾ. ಮತ್ತು ಪಂ.ರಾ. ವಿಶ್ವವಿದ್ಯಾಲಯ ಸಹಕುಲಾಧಿಪತಿಗಳಾದ ಪ್ರೀಯಾಂಕ ಖರ್ಗೆ, ಐ.ಎಫ್.ಎಫ್.ಶಿ.ಓ. ನವದೆಹಲಿ ಅಧ್ಯಕ್ಷರಾದ ದಿಲೀಪ ಸಂಘಾನಿ ಭಾಗವಹಿಸಲಿದ್ದಾರೆ.

ಉದ್ಘಾಟನಾ ಸಭೆಯ ಪ್ರಮುಖ ಭಾಷಣಕಾರರಾಗಿ ಚಾಣಕ್ಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಯಶವಂತ ಡೋಗ್ರೆ ಭಾಗವಹಿಸಲಿದ್ದಾರೆ. ಪುಣೆಯ ಭಾರತೀಯ ಸಹಕಾರ ಅಧ್ಯಯನ ಸಂಸ್ಥೆಯ ಅಧ್ಯಕ್ಷ ಜಿ.ಎಚ್. ಅಮಿನ್ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

▸▸ 4ನೇ ಪುಟಕ್ಕೆ

### ಸಮಾರೋಪ ಸಮಾರಂಭ

ಜ.4ರಂದು ಮಧ್ಯಾಹ್ನ 2.30ಕ್ಕೆ ನಾಗಾವಿಯ ಕ.ರಾ.ಗ್ರಾ. ಪಂ.ರಾ. ವಿ.ವಿ. ಆಡಿಟೋರಿಯಂ ಹಾಲ್‌ನಲ್ಲಿ ಸಮಾರೋಪ ಸಮಾರಂಭ ಜರುಗಲಿದ್ದು, ಪುಣೆಯ ವೆಮ್ನಿಕಾಮ್ ನಿರ್ದೇಶಕರಾದ ಡಾ.ಹೇಮಾ ಯಾದವ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಕ.ರಾ.ಗ್ರಾ.ಪಂ.ರಾ.ವಿ.ವಿ. ರೆಜಿಸ್ಟ್ರಾರ್ ಡಾ.ಸುರೇಶ ನಾಡಗೌಡರ, ಕೆ.ಎಸ್.ಎಸ್.ಎಫ್.ಸಿ.ಎಲ್. ಮ್ಯಾನೇಜಿಂಗ್ ಡೈರೆಕ್ಟರ್ ಶರಣಗೌಡ ಪಾಟೀಲ, ಪುಣೆಯ ಇಂಡಿಯನ್ ಸೊಸೈಟಿ ಫಾರ್ ಸ್ಟಡೀಸ್ ಇನ ಕೋ–ಆಪರೇಷನ್ ಕಾರ್ಯದರ್ಶಿ ಡಾ. ಅನಿಲ ಕರಂಜಿಕರ್ ಉಪಸ್ಥಿತರಿರುವರು. ಕೆಎಸ್‌ಎಸ್‌ಎಫ್.ಸಿಎಲ್ ಉಪಾಧ್ಯಕ್ಷ ಎ.ಆರ್. ಪ್ರಸನ್ನಕುಮಾರ್ ಅಧ್ಯಕ್ಷತೆ ವಹಿಸುವರು.

## ಸಂಪಾದಕೀಯ

# ಸರ್ಕಾರಕ್ಕೆ ಬಸ್ ದರ ಏರಿಕೆ ಬಿಸಿ

ರಾಜ್ಯ ಸರ್ಕಾರ ಏಕಾಏಕಿ ಬಸ್ ಪ್ರಯಾಣ ದರವನ್ನು ಶೇಕಡ 15ರಷ್ಟು ಏರಿಕೆ ಮಾಡಿದೆ. ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ. ಸರ್ಕಾರ ಬೆಲೆ ಏರಿಕೆ ನಿರ್ಧಾರ ಪ್ರಕಟಿಸಿ 24 ಗಂಟೆ ಆಗಿಲ್ಲ. ಆಗಲೇ ಸರ್ಕಾರದ ವಿರುದ್ಧ ಜನಾಕ್ರೋಶ ವ್ಯಕ್ತವಾಗಿದೆ.

ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆಯಿಂದ ರಾಜ್ಯದ ನಾಲ್ಕು ಸಾರಿಗೆ ನಿಗಮಗಳು ಆರ್ಥಿಕ ನಷ್ಟಕ್ಕೆ ಸಿಲುಕಿದ್ದು, ಈ ನಷ್ಟವನ್ನು ಬರಿಸಲು ಬೆಲೆ ಏರಿಕೆ ಮಾಡಲಾಗಿದೆ ಎನ್ನುವ ಆರೋಪಗಳು ವ್ಯಕ್ತವಾಗುತ್ತಿದೆ. ಇನ್ನೊಂದೆಡೆ ಶಕ್ತಿ ಯೋಜನೆಗೆ ಹಣ ಭರಿಸಲಾಗದೆ, ಪುರುಷರ ಮೇಲೆ ಬೆಲೆ ಏರಿಕೆಯ ಗದಾಪ್ರಹಾರ ಮಾಡಿದೆ ಎನ್ನುವ ಆರೋಪವು ಇದೆ.

ಆದರೆ ವಾಸ್ತವದಲ್ಲಿ ಸಾರಿಗೆ ಸಂಸ್ಥೆ ಸಿಬ್ಬಂದಿಗಳಿಗೆ ಕೊಡಬೇಕಾದ ಬಾಕಿ ಹಣ ಬೆಟ್ಟದಷ್ಟಿದೆ. ಅದು ಈ ಹಿಂದಿನ ಸರ್ಕಾರದಲ್ಲಿಯೂ ಇತ್ತು. ಈಗಿನ ಕಾಂಗ್ರೆಸ್ ಸರ್ಕಾರವು ಬಾಕಿ ಉಳಿಸಿಕೊಂಡೇ ಬಂದಿತ್ತು. ಈ ಕಾರಣಕ್ಕಾಗಿ ಸಾರಿಗೆ ಸಿಬ್ಬಂದಿ ನೌಕರರು ಮುಷ್ಕರಕ್ಕೆ ಕರೆ ನೀಡಿದರು. ಸಾರಿಗೆ ಸಂಸ್ಥೆ ನೌಕರರ ಎಚ್ಚರಿಕೆಗೆ ಸ್ಪಂದಿಸಿದ ಸರ್ಕಾರ, ಸಾರಿಗೆ ನೌಕರರ ಬೇಡಿಕೆ ಈಡೇರಿಸುವ ನಿರ್ಧಾರ ಕೈಗೊಂಡಿತು.

ಸಾರಿಗೆ ನೌಕರರ ಬೇಡಿಕೆ ಈಡೇರಿಸಲು ಸರ್ಕಾರ ಬೆಲೆ ಏರಿಕೆಗೆ ಮುಂದಾಯಿತು. ಸರ್ಕಾರದ ಈ ನಿರ್ಧಾರ ಇವತ್ತು ಜನರ ಆಕ್ರೋಶಕ್ಕೆ ಕಾರಣವಾಗಿದೆ.

ಸರ್ಕಾರ ಸಾರಿಗೆ ನೌಕರರ ಬೇಡಿಕೆ ಈಡೇರಿಸಲು ಮುಂದಾಗಿರುವುದು ಒಳ್ಳೆಯದು. ಆದರೆ ಏಕಾಏಕಿ ಅದು ಶೇಕಡ 15ರಷ್ಟು ಬೆಲೆ ಏರಿಕೆ ಜನಸಾಮಾನ್ಯರಿಗೆ ಹೊರೆಯಾಗಿ ಪರಿಣಮಿಸಲಿದೆ. ಒಂದು ವರ್ಗದ ಬೇಡಿಕೆ ಈಡೇರಿಸಲು, ಜನಸಾಮಾನ್ಯರ ಜೇಬಿಗೆ ಕತ್ತರಿ ಹಾಕುವ ಸರ್ಕಾರದ ನಿರ್ಧಾರ ಒಳ್ಳೆಯದಲ್ಲ.

ಹಿಂದಿನ ಸರ್ಕಾರದ ತಪ್ಪು ನೀತಿಗಳಿಂದಾಗಿ ಸಾರಿಗೆ ಸಂಸ್ಥೆ ನಷ್ಟದ ಹಾದಿಯಲ್ಲಿ ಸಾಗಿರಬಹುದು. ಆದರೆ ಅದನ್ನ ಸರಿ ಮಾಡುವ ನೆಪದಲ್ಲಿ ಬೆಲೆ ಏರಿಕೆಗೆ ಮುಂದಾಗಿರುವುದು ಸೂಕ್ತವಾದ ನಿರ್ಧಾರ ಅಲ್ಲ. ಸರಕಾರ ತನ್ನ ನಿರ್ಧಾರವನ್ನು ಪರಾಮರ್ಶಿಸಿಕೊಳ್ಳಲಿ.

### ಆನ್‌ಲೈನ್ ಬೆಟ್ಟಿಂಗ್ ಎಂಬ ಷಡ್ಯಂತ್ರ

# ನಿಮ್ಮ ಮಕ್ಕಳ ಮೇಲಿರಲಿ ನಿಗಾ

ಜಗತ್ತು ಇಂದು ಆನ್‌ಲೈನ್ ಮೇಲೆ ಹೆಚ್ಚಾಗಿ ಅವಲಂಬಿತವಾಗಿದೆ. ಯಾಕೆಂದರೆ ಇಂದು ತಂತ್ರಜ್ಞಾನವೂ ಉತ್ಕೃಷ್ಟ ಮಟ್ಟವನ್ನು ತಲುಪಿದೆ. ಯಾವುದೇ ಒಂದು ಅಂಗಡಿಯಲ್ಲಿ ವ್ಯಾಪಾರ ವಹಿವಾಟು ನಡೆಸಿದಾಗ, ಚಿಲ್ಲರೆ ಇಲ್ಲದೆ ಇದ್ದಾಗ ಆನ್‌ಲೈನ್ ಪೇಮೆಂಟ್ ಮಾಡಿ ಎಂದು ಹೇಳುವಷ್ಟರ ಮಟ್ಟಿಗೆ ಜಗತ್ತು ಮುಂದುವರೆದಿದೆ. ಬ್ಯಾಹಾಕಾಶದಲ್ಲಿ ಮಾನವ ಹಲವಾರು ಸಂಶೋಧನೆಗಳನ್ನು ಮಾಡುತ್ತಿದ್ದಾನೆ. ಒಂದು ವೇಳೆ ಎಲ್ಲ ಸಂಶೋಧನೆಗಳು ಯಶಸ್ವಿಯಾದರೆ, ಚಂದ್ರ ಮತ್ತು ಮಂಗಳ ಗ್ರಹದ ಮೇಲೆ ಮಾನವ ವಾಸಿಸುವ ದಿನಗಳು ದೂರವಿಲ್ಲ. ಈ ಎಲ್ಲ ಬೆಳವಣಿಗೆ ಮಧ್ಯೆ ಆನ್‌ಲೈನ್ ಬೆಟ್ಟಿಂಗ್ ದಂಧೆ ಮಾರಕವಾಗಿ ಪರಿಣಮಿಸುತ್ತಿದೆ.

ತಂತ್ರಜ್ಞಾನ ದಿನದಿಂದ ದಿನಕ್ಕೆ ಬದಲಾಗುತ್ತಿದೆ ಮತ್ತು ಜನರ ಅಗತ್ಯತೆಗಳು ಬದಲಾಗುತ್ತಿವೆ. ಕೆಲವು ದಶಕಗಳ ಹಿಂದೆ ಅನೈತಿಕವೆಂದು ಪರಿಗಣಿಸಲ್ಪಟ್ಟ ಚಟುವಟಿಕೆಗಳು ಆನ್‌ಲೈನ್ ಬೆಟ್ಟಿಂಗ್‌ನಷ್ಟು ಅನೈತಿಕವಲ್ಲ. ಜನರು ಮೊದಲು ಆನ್‌ಲೈನ್ ಬೆಟ್ಟಿಂಗ್ ಒಂದು ಸಾಮಾಜಿಕ ಪಿಡುಗು ಎಂದು ಭಾವಿಸುತ್ತಿದ್ದರು. ಆನ್‌ಲೈನ್ ಬೆಟ್ಟಿಂಗ್ ಮನರಂಜನೆಯ ಪ್ರಮುಖ ಮೂಲವಾಗಿದೆ. ವಿಶ್ವದಲ್ಲಿ ಅತಿ ವೇಗವಾಗಿ ಬೆಳೆಯುತ್ತಿರುವ ಉದ್ಯಮವಾಗಿದೆ. ಇದನ್ನು ಹೆಚ್ಚಿನ ಹಣವನ್ನು ಗಳಿಸಲು ಬಳಸಲಾಗುತ್ತಿದೆ. ಇತ್ತೀಚೆಗೆ ಭಾರತ ಸರ್ಕಾರವು ಆನ್‌ಲೈನ್ ಬೆಟ್ಟಿಂಗ್ ವೇದಿಕೆಗಳನ್ನು ಉತ್ತೇಜಿಸುವ ಹೊರಾಂಗಣ ಜಾಹೀರಾತುಗಳ ವಿರುದ್ಧ ಕ್ರಮ ಕೈಗೊಳ್ಳಲು ರಾಜ್ಯಗಳಿಗೆ ಸೂಚನೆ ನೀಡಿದೆ. ಕಠಿಣ ಕಾನೂನಿನಿಂದ ಆನ್‌ಲೈನ್ ಬೆಟ್ಟಿಂಗ್ ನಿಷೇಧದಲ್ಲಿ ಇದ್ದರೂ ಸಹ ಮಾರುಕಟ್ಟೆಯಲ್ಲಿ




ಅನೇಕ ಬೆಂಬಲಿತ ಬೆಟ್ಟಿಂಗ್ ವೆಬ್‌ಸೈಟ್‌ಗಳು ಹಾಗೂ ಮೊಬೈಲ್ ಅಪ್ಲಿಕೇಶನ್‌ಗಳು ಹರಿದಾಡುತ್ತಿವೆ. ಕಾರಣ ಇದರ ಪರಿಣಾಮ ಅನೇಕರ ಪ್ರಾಣಹಾನಿಯಾಗುತ್ತಿದೆ.

ಭಾರತದಲ್ಲಿ ಆನ್‌ಲೈನ್ ಬೆಟ್ಟಿಂಗ್ ನಿಷೇಧವಿದ್ದರೂ ಸಹ ಜಗತ್ತಿನಲ್ಲಿಯೇ ಅತಿ ಹೆಚ್ಚು ಬೆಟ್ಟಿಂಗ್ ಆಡುವ ಅಪಕೀರ್ತಿ ಭಾರತ ಹೊಂದಿದೆ. ಈ ಆನ್‌ಲೈನ್ ಬೆಟ್ಟಿಂಗ್‌ನಿಂದ ವಿಶೇಷವಾಗಿ ಹದಿ ಹರೆಯದ ವಯಸ್ಸಿನ ಯುವಕರು ಅಲ್ಪಸಮಯದಲ್ಲಿ ದೊಡ್ಡ ಮೊತ್ತವನ್ನು ಗಳಿಸುವ ಆಸೆ ಹೊಂದುವ ಮನಸ್ಸು ಮಾಡುತ್ತಾರೆ. ಎಲ್ಲಾ ಹಣ ಕಳೆದುಕೊಂಡು ನಂತರ ಸಾಲ ಮಾಡಿ ದಾರಿ ತೋಚದೆ ಮನೆಯಲ್ಲಿ ಹೇಳಿಕೊಳ್ಳಲಾಗದೆ ಆತ್ಮಹತ್ಯೆಗೆ ಮೊರೆ ಹೋಗುತ್ತಿದ್ದಾರೆ.

ಭಾರತದಲ್ಲಿಯೇ ಕರ್ನಾಟಕ ರಾಜ್ಯವು ಆನಲೈನ್ ಬೆಟ್ಟಿಂಗ್ ನಿಷೇಧ ಮಾಡಿರುವ ಮೊದಲನೆಯ ರಾಜ್ಯ ಎಂಬ ಕೀರ್ತಿಯನ್ನು ಹೊಂದಿದೆ. ಅದರ ಹೊರತಾಗಿಯೂ ಸಹ ಆನಲೈನ್ ಬೆಟ್ಟಿಂಗ್ ಸಂಪೂರ್ಣವಾಗಿ ನಿಂತಿಲ್ಲ. ಸಾಮಾಜಿಕ ಮಾಧ್ಯಮದಲ್ಲಿ ಅನೇಕ ಬೆಟ್ಟಿಂಗ್ ಅಪ್ಲಿಕೇಶನ್‌ಗಳು ಪ್ರಚೋದನೆ ನೀಡಿ, ಯುವಕರನ್ನು ಈ ಷಡ್ಯಂತ್ರಕ್ಕೆ ಎಳೆದುಕೊಳ್ಳುತ್ತಿದೆ. ಮಾರ್ಚ್ ತಿಂಗಳಲ್ಲಿ ಕರ್ನಾಟಕದ ಓರ್ವ ವ್ಯಕ್ತಿ 1.5 ಕೋಟಿ ರೂ ಸೋತು ಗಂಡ–ಹೆಂಡತಿ ಇಬ್ಬರೂ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಹೀಗೆ ಹತ್ತು ಹಲವಾರು ಘಟನೆ ನಡೆಯುತ್ತಿದ್ದು, ಸರ್ಕಾರವು ತೀರ ಕಠಿಣ ಕಾನೂನು ಕ್ರಮಗಳನ್ನು ತೆಗೆದುಕೊಂಡು ಈ ಆನ್‌ಲೈನ್ ಬೆಟ್ಟಿಂಗ್ ಅಪ್ಲಿಕೇಶನ್‌ಗಳ ಪ್ರಮೋಷನ್‌ನ್ನು ಸಂಪೂರ್ಣವಾಗಿ ನಿಷೇಧಿಸಬೇಕು. ಯುವಕರನ್ನು ಈ ಷಡ್ಯಂತ್ರದಿಂದ ದೂರ ಮಾಡಬೇಕು. ಆನ್‌ಲೈನ್ ಬೆಟ್ಟಿಂಗ್‌ನಿಂದ ಯುವಕರು ದೂರವೇ ಉಳಿಯಬೇಕಾಗಿದೆ. ಪೋಷಕರು ತಮ್ಮ ಮಕ್ಕಳ ಮೇಲೆ ನಿಗಾ ಇರಿಸಿ ಈ ಆನಲೈನ್ ಬೆಟ್ಟಿಂಗ್ ದುರ್ಘಟನೆಯಿಂದ ದೂರ ಇರಿಸಲು ಪ್ರಯತ್ನಿಸಬೇಕು.

ಆನ್‌ಲೈನ್ ವಹಿವಾಟು ನಡೆಸುವಾಗ ಎಚ್ಚರವಿರಬೇಕಾಗಿದೆ. ಯಾಕೆಂದರೆ ಗೊತ್ತಿಲ್ಲದ ನಂಬರ್‌ಗೆ ಹಣವನ್ನು ವರ್ಗಾಯಿಸಿದರೆ ಮುಗಿಯಿತು. ನಿಮ್ಮ ಖಾತೆಯಲ್ಲಿರುವ ಎಲ್ಲ ಹಣವನ್ನು ಅನ್ಯಮಾರ್ಗದ ಮೂಲಕ ಕಬಳಿಸುತ್ತಾರೆ. ಅಲ್ಲದೇ ಯಾರಿಗಾದರೂ ಒಟಿಪಿಯನ್ನು ಕಳುಹಿಸಿದಾಗಲೂ ಸಹ ವಂಚನೆ ಮಾಡುತ್ತಾರೆ. ನಿಮಗೆ ಗುರುತು–ಪರಿಚಯವಿಲ್ಲದ ವ್ಯಕ್ತಿಗೆ ನಿಮ್ಮ ಮೊಬೈಲ್ ಫೋನ್‌ನ್ನು ನೀಡಬಾರದು. ಒಂದು ವೇಳೆ ನೀಡಿದರೆ ನಿಮ್ಮ ಮೊಬೈಲ್‌ನಲ್ಲಿ ಇರುವ ಎಲ್ಲ ದಾಖಲೆಗಳನ್ನು ಕದ್ದು ಬಿಡುವರು. ಹೀಗಾಗಿ ಮಕ್ಕಳ ಕೈಗೆ ಮೊಬೈಲ್ ಫೋನ್ ಕೊಟ್ಟಾಗ ಅವರು ಸಹ ಗೊತ್ತಿಲ್ಲದೆ ಅಪ್ಲಿಕೇಶನಗಳನ್ನು ಡೌನ್‌ಲೋಡ್ ಮಾಡಿಕೊಂಡು ಬಿಡುತ್ತಾರೆ. ಇದರಿಂದ ಸಹ ವಂಚನೆಗೊಳಗಾಗುವ ಸಂಭವಗಳಿರುತ್ತವೆ. ಸೈಬರ್ ಪ್ರಕರಣಗಳು ಹೆಚ್ಚಾಗುತ್ತಿವೆ. ಆನ್‌ಲೈನ್ ವಹಿವಾಟು ನಡೆಸುವಾಗ ಎಚ್ಚರದಿಂದ ಇರಬೇಕಾದ ಪರಿಸ್ಥಿತಿ ಎದುರಾಗಿದೆ.



**– ಮಾಳೇಶ ಮಾದರ.**
ಸಮೂಹ ಸಂವಹನ–ಪತ್ರಿಕೋದ್ಯಮ ವಿಭಾಗ,
ಕವಿವಿ, ಧಾರವಾಡ.

### ಜ.3ರಂದು ಶಾರದಾ ಸಮೂಹ ಶಿಕ್ಷಣ ಸಂಸ್ಥೆಯ ಸುವರ್ಣ ಮಹೋತ್ಸವ ಸಮಾರಂಭ

# ಶಿಕ್ಷಣ ಕಾಶಿಯಲ್ಲಿ ಮೌನ ಕ್ರಾಂತಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಬಡವರ, ಶ್ರಮಿಕರ ಹಾಗೂ ಗ್ರಾಮೀಣ ಪ್ರದೇಶದ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದೆಂಬ ಮಹೋದ್ದೇಶದಿಂದ ನಾಡು ಮೆಚ್ಚಿದ ಜನನಾಯಕ, ಸಹಕಾರ ರಂಗದ ಭಿಷ್ಮ ಕೆ.ಎಚ್. ಪಾಟೀಲರು ಕಟ್ಟಿದ ಸಪ್ತಾಪೂರದಲ್ಲಿರುವ ಶಾರದಾ ಸಮೂಹ ಶಿಕ್ಷಣ ಸಂಸ್ಥೆ ಇದೀಗ ಸುವರ್ಣ ಮಹೋತ್ಸವ ಆಚರಿಸುತ್ತಿದೆ.

ಬಡವರ ಜ್ಞಾನ ದಾಸೋಹ ಶಾಲೆ ಎಂದೇ ಗುರುತಿಸಿಕೊಂಡಿರುವ ವೇಮನ ವಿದ್ಯಾವರ್ಧಕ ಸಂಘದ ಈ ಶಾಲೆ ಬಾಲಕಿಯರ ಪ್ರೌಢಶಾಲೆಯಾಗಿ ಆರಂಭಗೊಂಡು ಈಗ ಶಿಕ್ಷಣ ಸಂಸ್ಥೆಗಳ ಸಮೂಹವಾಗಿ ಮಾರ್ಪಟ್ಟು ಹೆಮ್ಮರವಾಗಿ ಬೆಳೆಯುತ್ತಿದೆ.

ಜ. 3ರಂದು ಸಾಯಾಂಕಾಲ 4 ಗಂಟೆಗೆ ಸಪ್ತಾಪೂರದಲ್ಲಿರುವ ಸಂಸ್ಥೆಯ ಆವರಣದಲ್ಲಿ ಜರುಗುವ ಸುವರ್ಣ ಮಹೋತ್ಸವ ಸಮಾರಂಭವನ್ನು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಶಾಸನ ರಚನೆ, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ. ಪಾಟೀಲರು ಉದ್ಘಾಟಿಸುವರು ಎಂದು ವೇಮನ ವಿದ್ಯಾವರ್ಧಕ ಸಂಘದ ಉಪಾಧ್ಯಕ್ಷ ರಮೇಶ ಜಂಗಲ ಪತ್ರಿಕಾಗೋಷ್ಠಿಯಲ್ಲಿ ವಿವರಿಸಿದರು.

ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರ ಘನ ಉಪಸ್ಥಿತಿಯಲ್ಲಿ ಜರುಗುವ ಈ ಸಮಾರಂಭದಲ್ಲಿ ಕರ್ನಾಟಕ ಹೈಕೋರ್ಟ್‌ನ ನ್ಯಾಯಮೂರ್ತಿ ರವಿ ಹೊಸಮನಿ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಕೃಷಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಪಿ.ಎಲ್. ಪಾಟೀಲ ಸ್ಮರಣ ಸಂಚಿಕೆ ಬಿಡುಗಡೆ ಮಾಡುವರು. ಶಾಸಕ ಎನ್.ಎಚ್. ಕೋನರೆಡ್ಡಿ ಅತಿಥಿಗಳಾಗಿ ಆಗಮಿಸುವರು. ಇದೇ ಸಂದರ್ಭದಲ್ಲಿ ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರು ಹಾಗೂ ಹೆಸರಾಂತ ನ್ಯಾಯವಾದಿಗಳು ಹಾಗೂ ರಡ್ಡಿ ಸಹಕಾರ ಬ್ಯಾಂಕಿನ ಚೇರಮನ್ ಕೆ.ಎಲ್. ಪಾಟೀಲರನ್ನು ಸನ್ಮಾನಿಸಲಾಗುವದು. ವೇಮನ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಮಾಜಿ ಶಾಸಕರಾದ ಡಿ.ಆರ್. ಪಾಟೀಲರು ಅಧ್ಯಕ್ಷತೆ ವಹಿಸುವರು ಎಂದರು.

ಪತ್ರಿಕಾಗೋಷ್ಠಿಯಲ್ಲಿ ವೇಮನ ವಿದ್ಯಾವರ್ಧಕ ಸಂಘದ ಗೌರವ ಕಾರ್ಯದರ್ಶಿ ಆರ್.ಕೆ. ಪಾಟೀಲ, ಸ್ಥಳೀಯ ಆಡಳಿತ ಮಂಡಳಿ ಚೇರಮನ್ ಕೆ.ವ್ಹಿ. ತಿಮ್ಮಾಪೂರ, ಗೌರವ ಅಧ್ಯಕ್ಷ ಎಸ್.ಬಿ. ಮುದಿಗೌಡರ, ಕಾರ್ಯಾಧ್ಯಕ್ಷ ಕೆ.ಎಸ್. ಪಾಟೀಲ, ಸದಸ್ಯರಾದ ಎ.ಜಿ. ಮುಳ್ಳೂರ, ನಿವೃತ್ತ ಪ್ರಾಚಾರ್ಯರಾದ ಬಿ.ವ್ಹಿ. ನವಲಗುಂದ, ಕೆ.ಎಸ್. ಕರ್ಲವಾಡ, ಡಾ. ಎಸ್.ಎಚ್ .ಪಾಟೀಲ, ಪ್ರೊ. ಎಲ್.ಎಚ್. ಮಲ್ಲಿಗವಾಡ, ಪುಷ್ಪಾ ಯಮನೂರ, ಡಾ. ಆನಂದ ಪಾಂಡುರಂಗಿ, ಎನ್.ವ್ಹಿ. ಕೆರಕಲಮಟ್ಟಿ, ಡಾ. ಬಿ.ವ್ಹಿ. ನಾಡಗೌಡರ, ಪಿ.ಕೆ. ಹೂಲಿಹಳ್ಳಿ ಮುಂತಾದವರು ಉಪಸ್ಥಿತರಿದ್ದರು.

ಶಾರದಾ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಶಿಶು ವಿಹಾರದಿಂದ ಹಿಡಿದು ಪದವಿಪೂರ್ವ ಕಾಲೇಜಿನವರೆಗೆ ಶಿಕ್ಷಣ ನೀಡಲಾಗುತ್ತಿದೆ. ಅತ್ಯಾಧುನಿಕ ಸಲಕರಣೆ ಸೌಲಭ್ಯಗಳೊಂದಿಗೆ ನುರಿತ ಸಿಬ್ಬಂದಿ ಹಾಗೂ ಸಮರ್ಥ ಆಡಳಿತ ಮಂಡಳಿಯಿಂದಾಗಿ ಸಂಸ್ಥೆ ಶಿಕ್ಷಣ ಕಾಶಿಯಲ್ಲಿ ಮೌನ ಕ್ರಾಂತಿ ಮಾಡುತ್ತಿದೆ.



ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಮಿಕ ಘಟಕದ ಗದಗ ಜಿಲ್ಲಾಧ್ಯಕ್ಷರನ್ನಾಗಿ ತೌಸಿಫ ಢಾಲಾಯತ ಇವರನ್ನು ಆಯ್ಕೆ ಮಾಡಿ ಗದಗ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್.ಅಬ್ಬಿಗೇರಿ ಆದೇಶಿಸಿದ್ದಾರೆ. ಸದರಿಯವರು ಬರುವ ದಿನಗಳಲ್ಲಿ ಗದಗ ಜಿಲ್ಲೆಯಲ್ಲಿ ಕಾರ್ಮಿಕ ಘಟಕವನ್ನು ಸಂಘಟನೆಗೊಳಿಸಬೇಕೆಂದು ಮತ್ತು ಭಾಷೆ, ನೆಲ, ಜಲ, ಧಕ್ಕೆಯಾದಾಗ ಹೋರಾಟಕ್ಕೆ ಮತ್ತು ಅನ್ಯಾಯದ ಹೋರಾಟಗಳಲ್ಲಿ ಪಾಲ್ಗೊಳ್ಳಬೇಕೆಂದು ಸೂಚಿಸಿ ಅವರಿಗೆ ಶುಭಾಶಯಗಳನ್ನು ತಿಳಿಸಿದರು.

# ಭೀಮಾ ಕೊರೆಗಾಂವ್ ವಿಜಯೋತ್ಸವ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಜೈ ಭೀಮ್ ದಲಿತ ರಕ್ಷಣಾ ವೇದಿಕೆಯ ವತಿಯಿಂದ ಡಾ. ಬಾಬಾಸಾಹೇಬ್ ಅಂಬೇಡ್ಕರರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ 207ನೇ ಭೀಮಾ ಕೊರೆಗಾಂವ್ ವಿಜಯೋತ್ಸವವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಅಧ್ಯಕ್ಷರಾದ ಅಶೋಕ ಎಂ.ಹಾದಿಮನಿ, ತಳಗೇರಿ ಓಣಿಯ ಮುಖಂಡರಾದ ಅಶೋಕ್ ಕುಡತಿನಿ, ಪುಂಡಲೀಕ ಕಲ್ಮನಿ, ರಾಘವೇಂದ್ರ ಪರಾಪುರ, ಅಗ್ನೆಶ ಕಲ್ಮನಿ, ಶಿವಾನಂದ ಸಕ್ರಿ, ವಿಷ್ಣು ಹಾದಿಮನಿ, ಕಾರ್ತಿಕ್ ನಾಗನಾಥನಹಳ್ಳಿ, ಸಿದ್ದಪ್ಪ ಮಾದರ. ಅಭಿ ಸಂಗಾಪುರ ಮುಂತಾದವರು ಉಪಸ್ಥಿತರಿದ್ದರು.

# ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಒತ್ತಾಯ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಅಧಿಕಾರದಲ್ಲಿ ಸಾಕಷ್ಟು ಆತ್ಮಹತ್ಯೆಗಳು ನಡೆಯುತ್ತಿವೆ. ಸಚಿನ್ ಅವರ ಆತ್ಮಹತ್ಯೆ ಪ್ರಕರಣದಲ್ಲಿ ಶಾಸಕ ಪ್ರಿಯಾಂಕ್ ಖರ್ಗೆ ಅವರ ಕೈವಾಡವಿದೆಯೆಂದು ಶಂಕಿಸಲಾಗಿದೆ. ಕಾರಣ, ಪ್ರಿಯಾಂಕ್ ಖರ್ಗೆ ಅವರು ರಾಜೀನಾಮೆ ನೀಡಬೇಕೆಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಆಗ್ರಹಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಆತ್ಮಹತ್ಯೆಗೆ ಶರಣಾದ ಸಚಿನ್ ಅವರಿಗೆ ಒಂದು ಕೋಟಿ ರೂ ಪರಿಹಾರ ನೀಡಬೇಕು. ಅವರ ಕುಟುಂಬದಲ್ಲಿ ಒಬ್ಬರಿಗೆ ಸರಕಾರಿ ನೌಕರಿಯನ್ನು ನೀಡಬೇಕು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಮುಡಾ ಹಗರಣ ಬೆಳಕಿಗೆ ಬರುವ ಭಯದಿಂದ ತನಿಖೆಗೆ ಹಿಂದೇಟು ಹಾಕುತ್ತಿದ್ದಾರೆಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ, ಪಕ್ಷದ ಹಿರಿಯರಾದ ಎಂ.ಎಸ್. ಕರೀಗೌಡ್ರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ನಗರ ಅಧ್ಯಕ್ಷ ಅನಿಲ ಅಬ್ಬಿಗೇರಿ, ಅಯ್ಯಪ್ಪ ಅಂಗಡಿ ಮುಂತಾದವರು ಉಪಸ್ಥಿತರಿದ್ದರು.

# ವಿಶೇಷ ಅನುದಾನ ಒದಗಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕ್ಷೇತ್ರ ವ್ಯಾಪ್ತಿಯಲ್ಲಿ ಸಾಕಷ್ಟು ರಸ್ತೆಗಳು ಸಂಪೂರ್ಣವಾಗಿ ಹದಗೆಟ್ಟಿದ್ದು, ರಸ್ತೆ ದುರಸ್ಥಿಗೊಳಿಸುವ ನಿಟ್ಟಿನಲ್ಲಿ ಹಾಗೂ ಹೊಸ ರಸ್ತೆಗಳನ್ನು ನಿರ್ಮಾಣ ಮಾಡಲು ಕ್ಷೇತ್ರಕ್ಕೆ ವಿಶೇಷ ಅನುದಾನವನ್ನು ಮಂಜೂರಿ ಮಾಡುವಂತೆ ಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಅವರು ಗುರುವಾರ ಬೆಂಗಳೂರಿನಲ್ಲಿ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿ ಮನವಿ ನೀಡಿದರು.



ಈ ವೇಳೆ ಶಾಸಕರು ಸಚಿವರಿಗ ಕ್ಷೇತ್ರದ ರಸ್ತೆಗಳ ಪರಿಸ್ಥಿತಿಯನ್ನು ವಿವರಿಸಿ, ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬಹಳಷ್ಟು ರಸ್ತೆಗಳು ಸಂಪೂರ್ಣವಾಗಿ ಹದಗೆಟ್ಟಿದ್ದು, ಸದರಿ ರಸ್ತೆಗಳನ್ನು ಕೂಡಲೇ ದುರಸ್ತಿ ಗೊಳಿಸುವುದು ಅವಶ್ಯವಾಗಿದೆ. ಅಲ್ಲದೆ ಬಹುದಿನಗಳಿಂದ ಅನೇಕ ಕಡೆಗಳಲ್ಲಿ ಪ್ರಮುಖ ನೂತನ ರಸ್ತೆಗಳನ್ನು ನಿರ್ಮಾಣ ಮಾಡುವದಕ್ಕೆ ಲೋಕೋಪಯೋಗಿ ಇಲಾಖೆಯಿಂದ ವಿಶೇಷ ಅನುದಾನವನ್ನು ಮಂಜೂರು ಮಾಡಿ ಬಿಡುಗಡೆಗೊಳಿಸುವಂತೆ ಮನವಿ ಮಾಡುವದಾಗಿ ಹೇಳಿದರು.

ಸಚಿವ ಸತೀಶ ಜಾರಕಿಹೊಳಿಯವರು ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿ, ಈ ಕುರಿತಂತೆ ಸಂಪೂರ್ಣ ಮಾಹಿತಿ ಪಡೆದು ಹಂತ ಹಂತವಾಗಿ ಕ್ಷೇತ್ರಕ್ಕೆ ಅನುದಾನ ಮಂಜೂರಿ ಮಾಡಿ ಅಲ್ಲಿನ ರಸ್ತೆಗಳ ಸುಧಾರಣೆಗೆ ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು.

# ಹೊಸ ವರ್ಷದ ನಿಮಿತ್ತ ವಿಶೇಷ ಪೂಜೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ಕಪ್ಪತ್ತಗುಡ್ಡದ ಮಡಿಲಿನಲ್ಲಿರುವ ದಕ್ಷಿಣ ಕಾಶಿ ಜಲಾಶಂಕರನಿಗೆ ಹೊಸ ವರ್ಷಾಚರಣೆಯ ದಿನವಾದ ಬುಧವಾರದಂದು ಮುಂಜಾನೆ ಪಂಚಾಮೃತ ಅಭಿಷೇಕ, ಬಿಲ್ವಾರ್ಚನೆ, ಮಹಾಮಂಗಳಾರತಿ ನೆರವೇರಿತು. ಈ ಪೂಜಾ ವಿಧಿ ವಿಧಾನವನ್ನು ಅರ್ಚಕರಾದ ಮಲ್ಲಯ್ಯಸ್ವಾಮಿ ಅಂಗಡಿ (ಹಿರೇಮಠ) ನೆರವೇರಿಸಿದರು.



ಭಕ್ತಿ ಸೇವೆಯನ್ನು ವಿಷ್ಣು ಕರಬಸಪ್ಪ ಕಲಘಟಗಿ ಉಳವಿ ಗಾರ್ಮೆಂಟ್ಸ್ ಗದಗ ಕುಟುಂಬದವರು ವಹಿಸಿಕೊಂಡಿದ್ದರು. ಈ ಪೂಜಾ ಕಾರ್ಯಕ್ರಮದಲ್ಲಿ ರಾಘವೇಂದ್ರಸಾ ಮೇರವಾಡೆ, ಶ್ರೀಕಾಂತಸಾ ಮೇರವಾಡೆ, ಸೋಮಶೇಖರಸ್ವಾಮಿ ಚಪ್ಪನಮಠ, ಮಹಾಂತೇಶ ನಿಮ್ಮನಗುಂದಿಮಠ, ಈರಣ್ಣ ಎಸ್.ಭಜಂತ್ರಿ, ಶಂಕರಗೌಡ ಭರಮಗೌಡ್ರ, ವಿಠ್ಠಲ ಮಾಳಗಿಮನಿ, ಜಲಾಶಂಕರ ಕಮಿಟಿಯ ಅಧ್ಯಕ್ಷರಾದ ಗಣೇಶ ಪಾಂಡಪ್ಪ ಲಮಾಣಿ ಹಾಗೂ ಸುತ್ತಮುತ್ತಲಿನ ಸಮಸ್ತ ಭಕ್ತಾದಿಗಳು ಪಾಲ್ಗೊಂಡಿದ್ದರು.

# ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆಗೆ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಖಾಲಿಯಿರುವ ಕಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಹುದ್ದೆ ಹಾಗೂ ಪಿ.ಎಮ್. ಅಭಿಮ್ ಕಾರ್ಯಕ್ರಮದಡಿಯಲ್ಲಿನ ಕಿರಿಯ ಆರೋಗ್ಯ ಸಹಾಯಕ ಹುದ್ದೆಗಳನ್ನು ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಗದಗ ಹಾಗೂ ಅಧ್ಯಕ್ಷರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಗದಗ ಇವರ ಅನುಮೋದನೆ ಮೇರೆಗೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿತ್ತು, ಸದರಿ ಹುದ್ದೆಗಳ ಅರ್ಜಿಗಳನ್ನು ಈಗಾಗಲೇ ಸ್ವಿಕರಿಸಲಾಗಿದ್ದು, ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಿದ ದಾಖಲಾತಿಗಳನ್ನು ಪರಿಶೀಲಿಸಲಾಗಿ ರೋಷ್ಟರ್ ಮೆರಿಟ್ ಪಟ್ಟಿಯನ್ನು 1:3 ಅನುಪಾತದಲ್ಲಿ ತಯಾರಿಸಲಾಗಿದ್ದು (ರೋಷ್ಟರ್ ಸಂಖ್ಯೆ 1 ರಿಂದ 13ರ ವರೆಗೆ) ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯಲ್ಲಿ ಸೂಚನಾ ಫಲಕದಲ್ಲಿ ಲಗತ್ತಿಸಿದ ಪಟ್ಟಿಯಂತೆ ಅಭ್ಯರ್ಥಿಗಳಿಗೆ ಮೂಲ ದಾಖಲಾತಿಗಳ ಪರಿಶೀಲನೆಯನ್ನು ಜನವರಿ 4 ರ ಸಂಜೆ ಒಳಗಾಗಿ ಕಚೇರಿ ಸಮಯದಲ್ಲಿ ಪರಿಶೀಲನೆ ಒಳಪಡಿಸಲಾಗಿದೆ.

ಈ ಮೂಲ ದಾಖಲಾತಿ ಪರಿಶೀಲನೆಗೆ ಅಭ್ಯರ್ಥಿಗಳು ಬಾರದೆ ಇದ್ದಲ್ಲಿ ಆಯ್ಕೆ ಪಟ್ಟಿಯಿಂದ ಕೈಬಿಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

# ಭೀಮಾ ಕೋರೆಗಾಂವ್ ವಿಜಯೋತ್ಸವ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಹಿತರಕ್ಷಣಾ ವೇದಿಕೆ ಗದಗ ವತಿಯಿಂದ ಭೀಮಾ ಕೋರೆಗಾಂವ್ ವಿಜಯೋತ್ಸವದ ಆಚರಣೆಯನ್ನು ನಗರಸಭೆ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಆಚರಿಸಲಾಯಿತು

ಕಾರ್ಯಕ್ರಮದಲ್ಲಿ ದ.ಸಂ.ಸದ ವೆಂಕಟೇಶಯ್ಯನವರು ಕೋರೆಗಾಂವ್ ವಿಜಯೋತ್ಸವದ ಹುತಾತ್ಮ ಯೋಧರನ್ನು ನೆನೆದರು. ಮಣಿಕಂಠ ಹಾದಿಮನಿ ಕೋರೆಗಾಂವ್ ವಿಜಯೋತ್ಸವದ ಇತಿಹಾಸವನ್ನು ಮೆಲುಕು ಹಾಕಿ ಅಂಬೇಡ್ಕರ್ ವಿಚಾರವನ್ನು ಮಂಡಿಸಿದರು. ಕಾರ್ಯಕ್ರಮವು ವೆಂಕಟೇಶಯ್ಯನವರ ಕ್ರಾಂತಿ ಗೀತೆಯೊಂದಿಗೆಯೊಂದಿಗೆ ಕೊನೆಗೊಂಡಿತು.

ಕಾರ್ಯಕ್ರಮದಲ್ಲಿ ಸಂಘಟನೆಯ ಅಧ್ಯಕ್ಷ ಪ್ರವೀಣ್ ಹಾದಿಮನಿ, ಕಾರ್ಯದರ್ಶಿ ಜುನ್ನೈದ್ ಉಮಚಗಿ, ಸದಸ್ಯರಾದ ಸಿದ್ದಪ್ಪ ಹಾದಿಮನಿ, ಮಂಜುನಾಥ ಹಾದಿಮನಿ, ವಿಶಾಲ ಘೋಶಾಲನವರ ಮುಂತಾದವರು ಉಪಸ್ಥಿತರಿದ್ದರು.

# ಪರಿಸರ ಸಂರಕ್ಷಣೆಯ ಜಾಗೃತಿ ಮೂಡಲಿ




■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿದ್ಯಾರ್ಥಿಗಳು ಚಿಕ್ಕಂದಿನಿಂದಲೇ ಪರಿಸರದ ಬಗ್ಗೆ ವಿಶೇಷ ಪ್ರೀತಿಯನ್ನು ಬೆಳೆಸಿಕೊಳ್ಳಬೇಕು. ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದ್ದು, ಈ ಕುರಿತು ಮನೆಯಲ್ಲಿ, ಓಣಿಯಲ್ಲಿ ಜನ ಜಾಗೃತಿ ಬೆಳೆಸುವುದು ಅವಶ್ಯಕವಿದೆ ಎಂದು ಬೂದಿಹಾಳ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಬಸವರಾಜ ದೇಸಾಯಿಪಟ್ಟಿ ಹೇಳಿದರು.

ಶಾಲೆಯ 1ರಿಂದ 7ನೇ ತರಗತಿಯವರೆಗಿನ ಮಕ್ಕಳನ್ನು ಕ್ಷೇತ್ರ ದರ್ಶನಕ್ಕೆ ಕರೆದುಕೊಂಡು ಹೋಗಿದ್ದ ಸಂದರ್ಭದಲ್ಲಿ ಅವರು ಮಾತನಾಡಿದರು.

ಸಾಲು ಮರದ ತಿಮ್ಮಕ್ಕನವರು ರಸ್ತೆಗುಂಟ ಮರಗಳನ್ನು ಬೆಳಸುವ ಮೂಲಕ ಅಲ್ಲಿ ತಿರುಗಾಡುವ ಎಲ್ಲರಿಗೂ ನೆರಳನ್ನು ನೀಡಿದ ಮಹನೀಯರಾಗಿದ್ದಾರೆ. ನಾವು ಎಷ್ಟು ಹೆಚ್ಚು ಗಿಡಗಳನ್ನು ಬೆಳೆಸುತ್ತೇವೆಯೋ ಅದರಿಂದ ಉತ್ತಮ ಮಳೆಯನ್ನು ಪಡೆಯಲು ಸಾಧ್ಯವಾಗುತ್ತದೆ. ಆದ್ದರಿಂದ ಅವಕಾಶ ಸಿಕ್ಕಾಗಲೆಲ್ಲ ಎಲ್ಲರೂ ಸಸಿಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಜವಾಬ್ದಾರಿಯನ್ನು ತೆಗೆದುಕೊಳ್ಳಬೇಕೆಂದು ಹೇಳಿದರು.

ಶಿಕ್ಷಕ ಸಿ.ಕೆ. ಕೇಸರಿ ಮಾತನಾಡಿ, ಶೈಕ್ಷಣಿಕ ಪ್ರವಾಸ, ಕ್ಷೇತ್ರ ದರ್ಶನ, ವನ ಭೋಜನ ಮುಂತಾದವುಗಳ ಹಿಂದಿರುವ ಆಶಯವನ್ನು ಸರಿಯಾಗಿ ಅರ್ಥ ಮಾಡಿಕೊಂಡು ನಿಮ್ಮ ಮಟ್ಟದಲ್ಲಿ ಪರಿಸರದ ಜ್ಞಾನವನ್ನು ಮೂಡಿಸಿಕೊಂಡು, ಇತರರಲ್ಲಿಯೂ ಜಾಗೃತಿ ಮೂಡಿಸಿರಿ ಎಂದರು.

### ಕಡಕೋಳ ಗ್ರಾಮದಲ್ಲಿ 3ವರ್ಷ ಗತಿಸಿದರೂ ಮುಗಿಯದ ಜೆಜೆಎಂ ಕಾಮಗಾರಿ

# ಹಳ್ಳ ಹಿಡಿದ ಕೋಟಿ ರೂ ವೆಚ್ಚದ ಯೋಜನೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಾ ಕೇಂದ್ರದಿಂದ ಕೆಲವೇ ಕಿಮೀಗಳ ಅಂತರದಲ್ಲಿರುವ ಕಡಕೋಳ ಗ್ರಾಮವು ಗ್ರಾಮ ಪಂಚಾಯತಿಯ ಕೇಂದ್ರಸ್ಥಾನವಾಗಿದ್ದು, ಇಲ್ಲಿ ಕಳೆದ ಮೂರು ವರ್ಷಗಳ ಹಿಂದೆ ಪ್ರಾರಂಭವಾದ ಜೆಜೆಎಂ ಕಾಮಗಾರಿ ಇನ್ನೂ ಪೂರ್ಣಗೊಂಡಿಲ್ಲ. ಅಧಿಕಾರಿಗಳಿಗೆ ಹೇಳಿದರೂ ಪ್ರಯೋಜನವಾಗಿಲ್ಲ, ಸಾರ್ವಜನಿಕರಿಗೆ ನೀರು ಸಿಗುತ್ತಿಲ್ಲ.

ಕಡಕೋಳ ಗ್ರಾಮದಲ್ಲಿ ಅಂದಾಜು 1 ಕೋಟಿ ರೂ ವೆಚ್ಚದಲ್ಲಿ ಜೆಜೆಎಂ ಕಾಮಗಾರಿಯ ಮೂಲಕ ಮನೆ ಮನೆಗೆ ನೀರು ಸರಬರಾಜು ಮಾಡುವ



ಕೆಲಸವು 3 ವರ್ಷಗಳ ಹಿಂದೆಯೇ ಪ್ರಾರಂಭವಾಗಿತ್ತು. ಗ್ರಾ.ಪಂ ವತಿಯಿಂದ ನಿರ್ಮಿಸಿದ ಸಿಸಿ ರಸ್ತೆಗಳನ್ನು ತೆಗೆದು ಪೈಪ್‌ಗಳನ್ನು ಜೋಡಿಸಲಾಗಿದೆ. ಮತ್ತೆ ಈ ರಸ್ತೆಗೆ ಸಿಮೆಂಟ್ ಕಾಂಕ್ರೀಟ್ ಹಾಕಿಲ್ಲ, ಪೈಪುಗಳನ್ನು ಸರಿಯಾಗಿ ಮುಚ್ಚಿಲ್ಲ. ಕೆಲವು ಕಡೆಗಳಲ್ಲಿ ನಲ್ಲಿಗಳನ್ನೇ ಅಳವಡಿಸಿಲ್ಲ. ಕಾಮಗಾರಿಯ ಮೂಲಕ ಗ್ರಾಮದಲ್ಲಿ 700ಕ್ಕೂ ಅಧಿಕ ಮನೆಗಳಿಗೆ ನೀರು ಸರಬರಾಜು ಕಲ್ಪಿಸಬೇಕಿತ್ತು. ಆದರೆ 600 ಮನೆಗಳಿಗೆ ಮಾತ್ರ ಸಂಪರ್ಕ ಜೋಡಿಸಲಾಗಿದೆ. ಉಳಿದ ನಿವಾಸಿಗಳು ನಿತ್ಯವೂ ಗ್ರಾಮ ಪಂಚಾಯತಿ ಕಚೇರಿಗೆ ತೆರಳಿ ನಮಗೆ ನೀರು ಯಾವಾಗ ಕಲ್ಪಿಸುತ್ತೀರಿ ಎನ್ನುವಂತಾಗಿದೆ.

ಹಲವು ಕಡೆಗಳಲ್ಲಿ ಈಗಾಗಲೇ ಪೈಪುಗಳು ಒಡೆದು ಹೋಗಿದ್ದು, ಎಲ್ಲೆಂದರಲ್ಲಿ ನೀರು ಪೋಲಾಗುತ್ತಿದೆ. ಸಾರ್ವಜನಿಕರ ಸಂಚಾರಕ್ಕೆ ತೆ-ಂದರೆ ಆಗಬಾರದೆನ್ನುವ ಉದ್ದೇಶದಿಂದ ಪೈಪುಗಳ ಜೋಡಣೆಗೆ ತೆಗೆದಿದ್ದ ರಸ್ತೆಗೆ ತಾತ್ಕಾಲಿಕವಾಗಿ ಮಣ್ಣು ಮುಚ್ಚಿ ಸಂಚಾರಕ್ಕೆ ಅವಕಾಶವನ್ನು ಕಲ್ಪಿಸಿದ್ದಾರೆ. ಇನ್ನೂ ಕೆಲವು ಕಡೆಗಳಲ್ಲಿ ಗ್ರಾ.ಪಂ ವತಿಯಿಂದ ಪ್ರತ್ಯೇಕ ಪೈಪ್ ಅಳವಡಿಸಿ ಜನತೆಗೆ ನೀರು ಪೂರೈಸುತ್ತಿದ್ದಾರೆ. ಸಂಬಂಧಿಸಿದ ಇಲಾಖೆಯ ಅಧಿಕಾರಿಗಳ ಅಸಮರ್ಪಕ ಉತ್ತರದಿಂದ ಇಲ್ಲಿಯ ಆಡಳಿತ ಮಂಡಳಿ ಬೇಸತ್ತು ಹೋಗಿದೆ.

ಕೇಂದ್ರ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಜಲಜೀವನ ಮಿಷನ್ ಯೋಜನೆಯಡಿ ಕೇಂದ್ರ-ರಾಜ್ಯ ಸರಕಾರಗಳು ಕೋಟಿಗಟ್ಟಲೇ ಅನುದಾನವನ್ನು ಒದಗಿಸುತ್ತಿವೆ. ಆದರೆ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳದೇ, ಸರಕಾರದ ನಿಯಮಗಳನ್ನು ಗಾಳಿಗೆ ತೂರಿ ತಮಗಿಷ್ಟ ಬಂದಂತೆ ಕೆಲಸ ಮಾಡುತ್ತಿದ್ದರೂ ಸಹ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಕೆಲಸ ನಡೆಯುವ ಸ್ಥಳಕ್ಕೆ ತೆರಳಿ ಪರಿಶೀಲನೆ ಮಾಡಿದರೆ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳಲು ಸಾಧ್ಯವಾಗಲಿದೆ.

ಶಿರಹಟ್ಟಿ ತಾಲೂಕಿನಾದ್ಯಂತ ಜೆಜೆಎಂ ಕಾಮಗಾರಿಗಳು ಸಮರ್ಪಕವಾಗಿ ನಡೆಯದೇ ಇರುವ ಬಗ್ಗೆ ಸ್ವತಃ ಶಾಸಕ ಡಾ. ಚಂದ್ರು ಲಮಾಣಿ ಅನೇಕ ಪ್ರಗತಿ ಪರಿಶೀಲನಾ ಸಭೆಗಳಲ್ಲಿ ಈ ಬಗ್ಗೆ ಖಡಕ್ ಆಗಿ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದರು. ಆದರೂ ಸಹ ಇಲ್ಲಿ ಅಧಿಕಾರಿಗಳು ಪದೇ ಪದೇ ಬದಲಾಗುತ್ತಿರುವದರಿಂದ ಸರಕಾರದ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳುತ್ತಿಲ್ಲ. ತಾಲೂಕಾ ಮಟ್ಟದ ಅಧಿಕಾರಿಗಳು ಇದನ್ನು ಸರಿಪಡಿಸುವ ಗೋಜಿಗೆ ಹೋದಂತೆ ಕಾಣುತ್ತಿಲ್ಲ. ಆದ್ದರಿಂದ ಜಿಲ್ಲಾ ಮಟ್ಟದ ಅಧಿಕಾರಿಗಳು ಇಂತಹ ಅಪೂರ್ಣ ಕೆಲಸಗಳು ಪೂರ್ಣಗೊಳ್ಳುವುದಕ್ಕೆ ಕ್ರಮ ವಹಿಸಬೇಕಿದೆ ಎಂಬುದು ತಾಲೂಕಿನ ಸಾರ್ವಜನಿಕರ ಒತ್ತಾಯವಿದೆ.

ಈ ಕುರಿತು ಪ್ರತಿಕ್ರಿಯಿಸಿದ ಕಡಕೋಳ ಗ್ರಾ.ಪಂ ಅಧ್ಯಕ್ಷೆ ಹೇಮಾ ಶರಣಪ್ಪ ಹರ್ಲಾಪೂರ, ಕಡಕೋಳ ಗ್ರಾಮದಲ್ಲಿ ಜೆಜೆಎಂ ಕಾಮಗಾರಿ ಅಪೂರ್ಣಗೊಂಡಿದೆ. ಪೈಪ್ ಅಳವಡಿಸುವ ಸಂದರ್ಭದಲ್ಲಿ ಸಿಮೆಂಟ್ ರಸ್ತೆ ಹಾಳಾಗಿದ್ದು, ಇದನ್ನು ಇಲ್ಲಿಯವರೆಗೂ ಸರಿಪಡಿಸಿಲ್ಲ. ಗ್ರಾ.ಪಂನಿಂದ ತಾತ್ಕಾಲಿಕವಾಗಿ ಮಣ್ಣು ಹಾಕಿ ಪೈಪ್‌ಗಳನ್ನು ಮುಚ್ಚಲಾಗಿದೆ. ಕೆಲವು ಕಡೆಗಳಲ್ಲಿ ನಲ್ಲಿ ಸಂಪರ್ಕ ಮಾಡಿಲ್ಲ. ಈ ಬಗ್ಗೆ ಸಂಬಂಧಿಸಿದ ಇಲಾಖೆಯ ತಾಲೂಕಾ ಮಟ್ಟದ ಅಧಿಕಾರಿಗಳಿಗೆ ಹೇಳಿದರೂ ಯಾವುದೇ ಪ್ರಯೋಜನವಾಗಿಲ್ಲ. ಆದ್ದರಿಂದ ಶೀಘ್ರದಲ್ಲೇ ಗ್ರಾಮಸ್ಥರ ಸಹಕಾರದಿಂದ ಯೋಜನೆ ಸಮರ್ಪಕ ಅನುಷ್ಠಾನಕ್ಕೆ ಆಗ್ರಹಿಸಿ ಶಿರಹಟ್ಟಿ ಆರ್‌ಡಬ್ಲ್ಯುಎಸ್ ಕಚೇರಿ ಎದುರು ಸತ್ಯಾಗ್ರಹ ಪ್ರಾರಂಭಿಸಲಾಗುವುದು ಎಂದರು.

ಗ್ರಾ.ಪಂ ಪಿಡಿಓ ಸುಜಾತಾ ಕಪ್ಪಲಿ, ಕಾಮಗಾರಿಯ ರಿಸ್ಟೋರೇಶನ್ ಆಗದೇ ಇರುವ ಬಗ್ಗೆ ಆರ್‌ಡಬ್ಲ್ಯುಎಸ್ ಕಚೇರಿಗೆ ಪತ್ರ ಮುಖೇನ ತಿಳಿಸಲಾಗಿದೆ ಎಂದರೆ, ಆರ್‌ಡಬ್ಲ್ಯುಎಸ್ ಜೆಇ, ಎಂ.ಬಿ. ಹರಕುಣಿ, ಈಗಾಗಲೇ ಸ್ಥಳ ಪರಿಶೀಲನೆ ನಡೆಸಿದೆ. ಫೈನಲ್ ನೋಟೀಸ್ ಇಶ್ಯೂ ಆಗಿದ್ದು ಡಿವಿಜಿನ್ ಕಚೇರಿಗೆ ಕಳುಹಿಸಲಾಗಿದೆ ಎಂದರು.

# 207ನೇ ಕೋರೆಗಾಂವ್ ವಿಜಯೋತ್ಸವ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಾಬಾಸಾಹೇಬ ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನರಾಮ ಸಮಾನತೆ ಸಮಿತಿ ವತಿಯಿಂದ ಡಾ. ಅಂಬೇಡ್ಕರರ ಪುತ್ಥಳಿಗೆ ಮಾಲಾರ್ಪಣೆ 207ನೇ ಭೀಮ್ ಕೋರೆಗಾಂವ್ ವಿಜಯೋತ್ಸವ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಗೋವಿಂದರಾಜ ಬಳ್ಳಾರಿ ಮಾತನಾಡಿ, ನಮ್ಮ ಸ್ವಾಭಿಮಾನದ ಬದುಕಿಗೆ 500 ಜನ ವೀರ ಮಹಾರ್ (ದಲಿತ) ಯೋಧರು ಸ್ವಾಭಿಮಾನಕ್ಕಾಗಿ, ಸ್ವಾಭಿಮಾನದ ಬದುಕಿಗಾಗಿ ಹೋರಾಡಿದ ವಿಶ್ವದ ಐತಿಹಾಸಿಕ ಏಕೈಕ ಘನಘೋರ ಯುದ್ಧ ನಡೆದಿರುವ ಭಿಮಾ ಕೋರೆಗಾವ್ ವಿಜಯ್ ಶೌರ್ಯ ಸ್ತಂಭದ ಕುರಿತು ಡಾ. ಬಾಬಾಸಾಹೇಬ ಅಂಬೇಡ್ಕರರು ಅನೇಕ ವಿಷಯಗಳನ್ನು ಕಲೆ ಹಾಕಿ ಅಧ್ಯಯನ ಮಾಡಿ ನಮ್ಮೆಲ್ಲರಿಗೂ ವಿಜಯೋತ್ಸವದ



ಬಗ್ಗೆ ತಿಳಿಸಿಕೊಟ್ಟಿದ್ದಕ್ಕಾಗಿ ನಾವು ಅವರಿಗೆ ಚಿರಋಣಿಗಳಾಗಿದ್ದೇವೆ ಎಂದು ತಿಳಿಸಿದರು.

ಯುವರಾಜ ಬಳ್ಳಾರಿ ಮಾತನಾಡಿದರು. ಈ ಸಂದರ್ಭದಲ್ಲಿ ದಲಿತ ಮುಖಂಡರಾದ ವೆಂಕಟೇಶಯ್ಯ, ಮಹೇಶ ನಾನಬಾಲ, ಸುಂಕಪ್ಪ ಗುತ್ತಿ, ನಾಗರಾಜ ಕಿನ್ನಾರಿ, ಸಣ್ಣರಾಮು ಪಿ.ಬಳ್ಳಾರಿ ಮುಂತಾದವರು ಉಪಸ್ಥಿತರಿದ್ದರು.

# ಜಾಂಬೋರೇಟ್‌ಗೆ ರೊಟ್ಟಿ-ಚಟ್ನಿ ರವಾನೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಧಾರವಾಡದಲ್ಲಿ ಜ.6-10ರವರೆಗೆ ಸಸ್ಯ ಚೇತನ ಜಿಲ್ಲಾ ಸ್ಕೌಟ್ಸ್, ಗೈಡ್ಸ್ ತರಬೇತಿ ಕೇಂದ್ರದಲ್ಲಿ ನಡೆದಯಲಿರುವ ಜಾಂಬೋರೇಟ್‌ಗೆ ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ತಾಲೂಕುಗಳಿಂದ ರೊಟ್ಟಿ ಮತ್ತು ಶೇಂಗಾ ಚಟ್ನಿಯನ್ನು ಗುರುವಾರ ಪಟ್ಟಣದ ಸರಕಾರಿ ಹಿರಿಯ ಮಾದರಿ ಹೆಣ್ಣು ಮಕ್ಕಳ ಶಾಲೆಯಿಂದ ಕ್ಷೇತ್ರ ಶಿಕ್ಷಣಾಧಿಕಾರಿ ಎನ್.ಎಚ್. ನಾಯಕ್ ಅವರ ಸಮ್ಮುಖದಲ್ಲಿ ರವಾನೆ ಮಾಡಲಾಯಿತು.



ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ರಾಜ್ಯ ಸಂಸ್ಥೆಯ ಮತ್ತು ಧಾರವಾಡ ಜಿಲ್ಲಾ ಸಂಸ್ಥೆಯ ಸಹಯೋಗದೊಂದಿಗೆ ಕಿತ್ತೂರು ಕರ್ನಾಟಕ ಬೆಳಗಾವಿ ವಿಭಾಗದ ಜಿಲ್ಲೆಗಳಾದ ಬಾಗಲಕೋಟೆ, ಬೆಳಗಾವಿ, ಧಾರವಾಡ, ಹಾವೇರಿ, ಗದಗ, ಕಾರವಾರ, ಶಿರಸಿ, ವಿಜಯಪುರ ಈ ಎಂಟು ಜಿಲ್ಲೆಗಳ ಸ್ಕೌಟ್ಸ್-ಗೈಡ್ಸ್‌ಗಳಿಗೆ ಪ್ರಥಮ ಕಿತ್ತೂರು ಕರ್ನಾಟಕ ಜಾಂಬೋರೇಟ್-2025 ಜ.6ರಿಂದ 10ರವರೆಗೆ ಸಸ್ಯ ಚೇತನ ಜಿಲ್ಲಾ ಸ್ಕೌಟ್ ಗೈಡ್ ತರಬೇತಿ ಕೇಂದ್ರ, ದಡ್ಡಿಕಮಲಾಪುರ ಧಾರವಾಡ ಜಿಲ್ಲೆಯಲ್ಲಿ ಆಯೋಜಿಸಲಾಗಿದ್ದು, ಈ ಕಾರ್ಯಕ್ರಮಕ್ಕೆ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನಿಂದ 5000 ರೊಟ್ಟಿ ಮತ್ತು ಶೇಂಗಾ ಚಟ್ನಿಯನ್ನು ಶಿಕ್ಷಣ ಇಲಾಖೆ ವತಿಯಿಂದ ವಿವಿಧ ಶಾಲೆಗಳಿಂದ ಸಂಗ್ರಹಿಸಿ ಕಳುಹಿಸಲಾಯಿತು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ ಮಾತನಾಡಿ, ಬೆಳಗಾವಿ ವಿಭಾಗದ ಈ ಜಾಂಬೋರೇಟ್‌ಗೆ ಎಂಟು ಜಿಲ್ಲೆಗಳಿಂದ ಸಾವಿರಾರು ವಿದ್ಯಾರ್ಥಿಗಳು ಆಗಮಿಸಲಿದ್ದು, ನಮ್ಮ ಭಾಗದಿಂದ ಶಿಕ್ಷಣ ಇಲಾಖೆ ವತಿಯಿಂದ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳ ಶಾಲೆಗಳಿಂದ ಸಂಗ್ರಹಿಸಿ ಕಳುಹಿಸಲಾಗಿದೆ. ಅಲ್ಲಿನ ಕಾರ್ಯಕ್ರಮ ಯಶಸ್ವಿಯಾಗಲಿ ಎಂದು ಹೇಳಿದರು.

ಈ ವೇಳೆ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರಲಾಪುರ, ಬಿಆರ್‌ಪಿ ಈಶ್ವರ ಮೆಡ್ಲೇರಿ, ಸಿಆರ್‌ಪಿ ಗಳಾದ ಸತೀಶ ಬೋಮಲೆ, ಉಮೇಶ ನೇಕಾರ, ಲೋಕೇಶ ಮಠದ, ಮುಖ್ಯ ಶಿಕ್ಷಕ ಬಸವರಾಜ ಕುಂಬಾರ, ಶಿಕ್ಷಕರಾದ ಎನ್.ಎಸ್. ಬಂಕಾಪುರ, ಆರ್.ಎಮ್. ಶಿರಹಟ್ಟಿ, ಎಚ್.ಡಿ. ನಿಂಗರೆಡ್ಡಿ, ಎಲ್.ಎ. ಬಣಕಾರ, ಆರ್.ಕೆ. ಉಪನಾಳ, ಹಾಲನಗೌಡ ಪಾಟೀಲ ಹಾಜರಿದ್ದರು.

# ವಿನೂತನ ರೀತಿಯಲ್ಲಿ ಹೊಸ ವರ್ಷ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶರಣ ಬಸವೇಶ್ವರ ಬಡಾವಣೆಯಲ್ಲಿರುವ ಅಂಬಿಗರ ಚೌಡಯ್ಯ ಅನುಭಾವ ಪೀಠದಲ್ಲಿ ಗಣಾಚಾರದ ಶರಣೆ ನಿರ್ಮಲಮ್ಮನವರು ಮೊಮ್ಮಕ್ಕಳೊಂದಿಗೆ ವಿನೂತನ ರೀತಿಯಲ್ಲಿ ಹೊಸ ವರ್ಷ ಆಚರಿಸಿದರು.

ಅಂಬಿಗ ಕುಮಾರ ಚೌಡಯ್ಯ ಎಂಬ ಅಂಕಿತನಾಮದಿಂದ 10 ಸಾವಿರಕ್ಕೂ ಹೆಚ್ಚು ವಚನಗಳನ್ನು ರಚಿಸಿದ ಗಣಾಚಾರದ ಶರಣ ದಿವಂಗತ ಮಲ್ಲಿಕಾರ್ಜುನ ಹಾದಿಮನಿಯವರ ಧರ್ಮಪತ್ನಿ ಗಣಾಚಾರದ ಶರಣೆ ನಿರ್ಮಲಮ್ಮನವರು ಶರಣ ತತ್ವದಡಿಯಲ್ಲಿ ಮಕ್ಕಳಿಗೆ ಹಾಗೂ ಮೊಮ್ಮಕ್ಕಳಿಗೆ ಮಾರ್ಗದರ್ಶನ ನೀಡುತ್ತ ಹೊಸ ವರ್ಷ ಆಚರಣೆಯನ್ನು 12ನೇ ಶತಮಾನದ ಶರಣರಾದ ಬಸವಣ್ಣನವರು, ಜೇಡರ ದಾಸಿಮಯ್ಯ, ಮಾದಾರ ಚನ್ನಯ್ಯ, ಅಂಬಿಗರ ಚೌಡಯ್ಯ, ಅಕ್ಕಮಹಾದೇವಿ, ಸಮಗಾರ ಹರಳಯ್ಯ ಆದಿಯಾಗಿ ವಿವಿಧ ಶರಣರ ವಚನಗಳನ್ನು ಹಾಡುತ್ತ ಸಂತೋಷದಿಂದ ಹೊಸ ವರ್ಷ ಆಚರಣೆ ಮಾಡಿದರು.

ಈ ಸಂದರ್ಭದಲ್ಲಿ ಶರಣ ಶ್ರೀಪಾದ ಹಾದಿಮನಿ, ಸಹೋದರರಾದ ಆನಂದ, ಬಸವಪ್ರಭು ಹಾಗೂ ಕುಟುಂಬ ವರ್ಗದವರು ಉಪಸ್ಥಿತರಿದ್ದರು.

# ನೂತನ ಪದಾಧಿಕಾರಿಗಳ ಆಯ್ಕೆ


■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ನಿವೃತ್ತ ಸರಕಾರಿ ನೌಕರರ ಕೋ-ಆಪ್ ಕ್ರೆಡಿಟ್ ಸೊಸೈಟಿಯ ಆಡಳಿತ ಮಂಡಳಿಗೆ 2025-30ರ ಅವಧಿಗೆ ನಿರ್ದೇಶಕರು ಅವಿರೋಧವಾಗಿ ಆಯ್ಕೆಯಾದರೆಂದು ಚುನಾವಣಾ ಅಧಿಕಾರಿಯಾದ ಶಾಂತಾ ಎಚ್.ಎಮ್. ಸಂಘದ ಸಭೆಯಲ್ಲಿ ಘೋಷಿಸಿದರು. ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಶ್ರೀ ಬಸವಣ್ಣೆಪ್ಪ ಮಹಾದೇವಪ್ಪ ಬಿಳೆಯಲಿ ಅಧ್ಯಕ್ಷರಾಗಿ ಹಾಗೂ ಗಣಪತಿ ಕೃಷ್ಣಪ್ಪನಾಯಕ ತಮ್ಮಣ್ಣವರ ಉಪಾಧ್ಯಕ್ಷರಾಗಿ, ನಿರ್ದೇಶಕರುಗಳಾಗಿ ಭೀಮರಡ್ಡಿ ಡಿ.ಕಿಲಬನವರ, ಮಲ್ಲಪ್ಪ ಎಫ್. ಡೋಣಿ, ಮಲ್ಲಿಕಾರ್ಜುನ ಪ.ತಳಬಾಳ, ಮಾಳಿಂಗರಾಯ ಚಿ.ವಗ್ಗಿ, ರಾಚಪ್ಪ ತೋ.ನಾರಾಯಣಪುರ, ವೀರನಗೌಡ ರಾ.ಕುಲಕರ್ಣಿ, ಶೇಖರಗೌಡ ದೊ. ಗೌಡಪ್ಪಗೌಡ್ರ, ಪುಷ್ಪಾ ವಿ.ಹಿರೇಮಠ, ಹಾಜನಬೀಬಿಜಹೀರಾ ಸಂ. ದಂಡಿನ, ರಾಮಣ್ಣ ದ್ಯಾ.ಕಪ್ಪಲಿ, ಬಸವರಡ್ಡಿ ಶೇ.ಸಿದ್ನೆಕೊಪ್ಪ, ಕಲ್ಮೇಶ್ವರ ಹ.ಬೇಲೂರ, ರಾಮಪ್ಪ ಸ.ಪೂಜಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾ ಅಧಿಕಾರಿಗಳು ಘೋಷಿಸಿದ್ದಾರೆ.



ಆಯ್ಕೆಯಾದ ಪದಾಧಿಕಾರಿಗಳಿಗೆ ಪ್ರಮಾಣ ಪತ್ರವನ್ನು ಚುನಾವಣಾ ಅಧಿಕಾರಿಗಳು ಪ್ರದಾನ ಮಾಡಿದರು. ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ವಾಯ್.ಕೆ. ಪಿಡಗಣ್ಣವರ ಸ್ವಾಗತಿಸಿ ವಂದಿಸಿದರು.

# ಬಿಬಿಎ 2ನೇ ಸೆಮಿಸ್ಟರ್ ಪರೀಕ್ಷೆ ಫಲಿತಾಂಶ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಮಹಾವಿದ್ಯಾಲಯದ ಶೈಕ್ಷಣಿಕ ಸಾಲಿನ ಬಿಬಿಎ ಕೋರ್ಸಿನ 2ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳಾದ ಶ್ರೀನಿವಾಸರೆಡ್ಡಿ ಸಾಸ್ವಿಹಳ್ಳಿ (601 ಅಂಕ) ಪ್ರಥಮ, ವಿದ್ಯಾಶ್ರೀ ದಾವಣಗೆರಿ (591 ಅಂಕ) ದ್ವಿತೀಯ, ಪೂರ್ಣಿಮಾ ಮಲ್ಲಾಪುರ (586 ಅಂಕ) ತೃತೀಯ, ಪುನೀತ ಪಟೇಲ (541 ಅಂಕ) ನಾಲ್ಕನೇ ಸ್ಥಾನ, ಸಂಜನಾ ಶಿರೋಳ (540 ಅಂಕ) ಐದನೇ ಸ್ಥಾನ ಪಡೆದಿದ್ದಾರೆ.

ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಚೈತ್ರಾ ಡಿ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

### ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯಿಂದ ಮಹಿಳಾ ಗೋಷ್ಠಿ

# ಮಕ್ಕಳ ಶೈಕ್ಷಣಿಕ ಮುನ್ನಡೆಗೆ ಪೂರಕವಾಗಿ ಶ್ರಮಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳು ತಮ್ಮ ಅಭಿವೃದ್ಧಿಶೀಲ ಮನಸ್ಸು ಹಾಗೂ ಸ್ವಭಾವಗಳಲ್ಲಿ ವೈಜ್ಞಾನಿಕ ತಂತ್ರಜ್ಞಾನದ ಸದ್ಬಳಕೆಯನ್ನು ಮಾಡಿಕೊಂಡು ಹೊಸ ಹೊಸ ಅವಿಷ್ಕಾರ ಹಾಗೂ ವೈಜ್ಞಾನಿಕ ಮನೋಭಾವನೆಯೊಂದಿಗೆ ಕಲಿಕೆಯಲ್ಲಿ ತೊಡಗಿ ಬದುಕನ್ನು ಸಧೃಢಗೊಳಿಸಬೇಕೆಂದು ಚಿಂತಕಿ ಕವಿತಾ ದಂಡಿನ ಹೇಳಿದರು.

ಅವರು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯಿಂದ ಜರುಗಿದ ಗದಗ ತಾಲೂಕಾ ಮಹಿಳಾ ಸಮಾವೇಶ ಹಾಗೂ ವಿಚಾರ ಗೋಷ್ಠಿಯಲ್ಲಿ 'ಮಕ್ಕಳ ಶಿಕ್ಷಣದಲ್ಲಿ ತಂತ್ರಜ್ಞಾನ ಬಳಕೆ ಹಾಗೂ ಪೋಷಕರ ಪಾತ್ರ' ವಿಷಯವಾಗಿ ಉಪನ್ಯಾಸ ನೀಡಿದರು.

ತಂತ್ರಜ್ಞಾನವು ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಯಲ್ಲಿ ಪ್ರಮುಖವಾಗಿದ್ದು, ಮುಖ್ಯವಾಗಿ ವಿಶೇಷ ಅಗತ್ಯತೆ ಇರುವ ಮಕ್ಕಳಿಗೆ ಪರಿಣಾಮಕಾರಿ ಸಾಧನವಾಗಿದೆ.



ಶಿಕ್ಷಕರೊಂದಿಗೆ ಪಾಲಕರೂ ಸಹಿತ ಮಕ್ಕಳ ಶೈಕ್ಷಣಿಕ ಮುನ್ನಡೆಗೆ ಪೂರಕವಾಗಿ ಶ್ರಮಿಸಬೇಕೆಂದರು.

ಇಂದು ಎಲ್ಲಡೆ ತಂತ್ರಜ್ಞಾನವು ವ್ಯಾಪಕವಾಗಿದೆ. ವಿದ್ಯಾರ್ಥಿಗಳಲ್ಲಿ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಿ ಅವರಲ್ಲಿ ವೈಜ್ಞಾನಿಕ ಮನೋಭಾವ, ಸಂಶೋಧನಾ, ತಾರ್ಕಿಕತೆ, ನಿಖರತೆ, ನೈಜ್ಯತೆ ಮೂಡಿಬರುವಲ್ಲಿ ಶಾಲೆಗಳೊಂದಿಗೆ ಸಮುದಾಯ ಒಗ್ಗಟ್ಟಾಗಿ ಶ್ರಮಿಸಿದಾಗ ಯಶಸ್ಸು ಸಾಧ್ಯ ಎಂದರು.

ಅಧ್ಯಕ್ಷತೆಯನ್ನು ಸ್ವಸಹಾಯ ಸಂಘಗಳ ಒಕ್ಕೂಟದ ಅಧ್ಯಕ್ಷೆ ಲತಾ ಪತ್ತಾರ ವಹಿಸಿ ಮಾತನಾಡಿ, ಸ್ತ್ರೀ ಸಮೂಹವು ಶಕ್ತಿಶಾಲಿ ಸಮೂಹವಾಗಿದ್ದು, ಮನೆಯ ಆರ್ಥಿಕ ಸದೃಢತೆಗೆ ಮಹಿಳಾ ಸ್ತ್ರೀ ಶಕ್ತಿ ಸಂಘಗಳು ಸಹಕಾರಿಯಾಗಿವೆ ಎಂದರು.

ಧರ್ಮಸ್ಥಳ ಯೋಜನೆಯ ಪ್ರಾದೇಶಿಕ ನಿರ್ದೇಶಕ ಚಂದ್ರಶೇಖರ ಜೆ, ಗದಗ ಜಿಲ್ಲಾ ನಿರ್ದೇಶಕ ಯೋಗಿಶ ಎ ಸಂಘವು ನಡೆದು ಬಂದ ದಾರಿ, ಯೋಜನೆಗಳ ಅನುಷ್ಠಾನ, ನಿರ್ವಹಣೆ ಕುರಿತು ಮಾಹಿತಿ ನೀಡಿದರು.

ಶೈಲಾ, ಪೂರ್ಣಿಮಾ ಮತ್ತು ಲಕ್ಷ್ಮೀ ಪ್ರಾರ್ಥಿಸಿದರು. ಗದಗ ವಲಯದ ಮೇಲ್ವಿಚಾರಕಿ ಲಕ್ಷ್ಮೀ ಸ್ವಾಗತಿಸಿದರು. ತಾಲೂಕಾ ಯೋಜನಾಧಿಕಾರಿ ಸುರೇಂದ್ರ ನಾಯಕ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಲ್ಪಾ ನಿರೂಪಿಸಿದರು. ಸಮನ್ವಯಾಧಿಕಾರಿ ಗಂಗಮ್ಮ ಮರಾಠಿ ವಂದಿಸಿದರು.

ಕಾರ್ಯಕ್ರಮದಲ್ಲಿ ಗದಗ ತಾಲೂಕಿನ ಜ್ಞಾನವಿಕಾಸ ಯೋಜನೆಯ ಸಮನ್ವಯಾಧಿಕಾರಿಗಳು, ಮೇಲ್ವಿಚಾರಕರು, ಸೇವಾ ಪ್ರತಿನಿಧಿಗಳು, ಸದಸ್ಯರು, ಒಕ್ಕೂಟದ ಪದಾಧಿಕಾರಿಗಳು, ಕ್ಷೇತ್ರ ಯೋಜನಾಧಿಕಾರಿಗಳು ಉಪಸ್ಥಿತರಿದ್ದರು.

ಸಂಪನ್ಮೂಲ ವ್ಯಕ್ತಿ ವಿಜಯಲಕ್ಷ್ಮಿ ಹೂಗಾರ ನೀರಿನ ಸದ್ಬಳಕೆಯಲ್ಲಿ ನಮ್ಮೆಲರ ಪಾತ್ರದ ಕುರಿತು ಮಾತನಾಡಿ, ನೀರು ಜೀವಜಲ. ಹಿತ-ಮಿತವಾಗಿ ಬಳಸಬೇಕು. ಯುವ ಪೀಳಿಗೆ ನೀರಿನ ಮಹತ್ವದ ಕುರಿತು ತಿಳಿದುಕೊಂಡು ಅವುಗಳ ರಕ್ಷಣೆ-ಯತ್ತ ಕಾಳಜಿ ವಹಿಸಬೇಕು. ಜೀವಜಲ ಮನುಷ್ಯ ಸಂಕುಲಕ್ಕೆ ಅತ್ಯವಶ್ಯಕ. ಈ ಮಹತ್ವದ ಕುರಿತು ಮನೆಯಿಂದಲೇ ಜಾಗೃತಿ ಕಾರ್ಯ ನಡೆಯಬೇಕಾಗಿದೆ ಎಂದರು.

## ಪದಾಧಿಕಾರಿಗಳಿಗೆ ಪದಗ್ರಹಣ ಸಮಾರಂಭ ನಾಳೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ತಾಲೂಕು ಶಾಖೆಗೆ ನೂತನವಾಗಿ ಆಯ್ಕೆಯಾಗಿರುವ ಪದಾಧಿಕಾರಿಗಳಿಗೆ ಪದಗ್ರಹಣ ಸಮಾರಂಭ ಹಾಗೂ 2025ರ ಕ್ಯಾಲೆಂಡರ್ ಬಿಡುಗಡೆ ಕಾರ್ಯಕ್ರಮದ ಜ.4ರಂದು ಬೆಳಿಗ್ಗೆ 11 ಗಂಟೆಗೆ ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಸಭಾಭವನದಲ್ಲಿ ನಡೆಯಲಿದೆ ಎಂದು ಕ.ರಾ.ಸ.ನೌ.ಸಂ ಲಕ್ಷ್ಮೇಶ್ವರ ತಾಲೂಕಾ ಕಾರ್ಯದರ್ಶಿ ಎಮ್.ಎ. ನದಾಫ್ ತಿಳಿಸಿದ್ದಾರೆ. ಅವರು ಈ ಕುರಿತು ಪತ್ರಿಕಾ ಪ್ರಕಟಣೆಯನ್ನು ನೀಡಿ, ಕಾರ್ಯಕ್ರದ ಸಾನ್ನಿಧ್ಯವನ್ನು ಹೂವಿನಶಿಗ್ಲಿ ವಿರಕ್ತಮಠದ ಚನ್ನವೀರ ಮಹಾಸ್ವಾಮಿಗಳು ವಹಿಸಲಿದ್ದು, ಶಾಸಕ ಡಾ. ಚಂದ್ರು ಲಮಾಣಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಮಾಜಿ ಶಾಸಕರುಗಳಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಉಪಾಧ್ಯಕ್ಷ ಫಿರ್ದೋಷ ಆಡೂರು, ಕ.ರಾ.ಸ.ನೌ.ಸಂ. ಜಿಲ್ಲಾಧ್ಯಕ್ಷ ರವಿ ಗುಂಜಿಕರ, ಡಿ.ಡಿ.ಪಿ.ಐ ಆರ್.ಎಸ್. ಬುರಡಿ, ಡಿ.ಎಚ್. ಪಾಟೀಲ್ ಸೇರಿದಂತೆ ತಾಲೂಕಿನ ಅಧಿಕಾರಿಗಳು ಮುಖ್ಯ ಅತಿಥಿಗಳಾಗಿ ಆಗಮಿಸುವರು. ವಿಶೇಷ ಅತಿಥಿಗಳಾಗಿ ಜಿಲ್ಲೆಯ ಎಲ್ಲಾ ತಾಲೂಕಿನ ಅಧ್ಯಕ್ಷರು ಆಗಮಿಸಲಿದ್ದಾರೆ ಎಂದು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ (ಮುನ್ಸಿಪಾಲಿಟಿ) ಯೋಜನೆ ಹಂತ –4 ಶೇ 5 % ಯೋಜನೆಯ ಅಂಗವಿಕಲರ ವಿಕಲಚೇತನರ ಫಲಾನುಭವಿಗಳಿಗೆ ಗದಗ ನಗರಸಭೆ ವ್ಯಾಪ್ತಿಗೆ ಬರುವ ಅನುದಾನದಡಿ ವಿಕಲಚೇತನರ ಕ್ಷೇಮಾಭಿವೃದ್ಧಿ ಘಟಕದಡಿಯಲ್ಲಿ ವೈಯಕ್ತಿಕ ಕಾರ್ಯಕ್ರಮಗಳ ಅನುಷ್ಠಾನ ಸಂಬಂಧಿಸಿದಂತೆ ವಿಕಲಚೇತನ ಸ್ನೇಹಿ ಸ್ಕೂಟರ್ ಖರೀದಿಸಿ ಪೂರೈಸಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜನವರಿ 31 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಗದಗ–ಬೆಟಗೇರಿ ನಗರಸಭೆಯ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು

# ನಾವೆಲ್ಲರೂ ವಿಶ್ವಮಾನವರಾಗೋಣ

■ ವಿಜಯಸಾಕ್ಷಿ ಸುದ್ದಿ, ಗದಗ

ಅಲ್ಪತೆ ಅಳಿಸಿ ವಿಶ್ವತೆ ತರುವುದೇ ಶಿಕ್ಷಣದ ಉದ್ದೇಶವಾಗಬೇಕು. ಪ್ರತಿಯೊಬ್ಬರನ್ನು ವಿಶ್ವಮಾನವರನ್ನಾಗಿ ರೂಪಿಸುವಲ್ಲಿ ವಿದ್ಯೆ, ಸಂಸ್ಕೃತಿ ಮತ್ತು ನಾಗರಿಕತೆಗಳ ಪಾತ್ರ ಮಹತ್ವದ್ದು. ಜಾತಿ–ಮತ– ಪಂಥಗಳನ್ನು ಮೀರಿ ನಾವೆಲ್ಲರೂ ವಿಶ್ವಮಾನವರಾಗೋಣ ಎಂದು ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2726ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು, ಬಾಲ್ಯದಿಂದಲೇ ನಾವೆಲ್ಲರೂ ಒಂದು ಎಂಬ ಭಾವನೆಯನ್ನು ಮಕ್ಕಳಲ್ಲಿ ಬಿತ್ತಬೇಕು. ಮನುಷ್ಯ ಹುಟ್ಟುತ್ತಲೇ ವಿಶ್ವಮಾನವನಾಗಿರುತ್ತಾನೆ. ಬೆಳೆಯುತ್ತ ಸಮಾಜ ಅಲ್ಪಮಾನವನನ್ನಾಗಿ ರೂಪಿಸುತ್ತದೆ. ಇವನಾರವ ಇವನಾರವ ಎನ್ನದೆ, ಇವನಮ್ಮವ ಇವನಮ್ಮವ ಎನ್ನುವುದೇ ವಿಶ್ವಮಾನವ ಕಲ್ಪನೆ. ವಿಶ್ವವೇ ನಮ್ಮ ಮನೆ ಎಂಬ ವಿಶಾಲವಾದ ಭಾವನೆ ಬೆಳೆದಾಗ ಮಾತ್ರ ವಿಶ್ವಮಾನವ ದಿನಾಚರಣೆ ಸಾರ್ಥಕ ಎಂದರು.

ಮನುಷ್ಯ ಜಾತಿ ತಾನೊಂದೇ ವಲಂ ಎಂದು ಅಸಮಾನತೆಯನ್ನು ತೊಡೆದು ಹಾಕಬೇಕು. ದ್ವೇಷ, ಅಸೂಯೆ ಬಿಟ್ಟು ವಿಶ್ವಕುಟುಂಬಿಗಳಾಗಬೇಕು. ಪ್ರತಿಯೊಬ್ಬರೂ ಪ್ರೀತಿ, ಸಾಮರಸ್ಯ, ಸಮಾನತೆಯಿಂದ ಬದುಕುವುದೇ ನಿಜವಾದ ಧರ್ಮ. ಕುವೆಂಪು ಅವರು ಆ ಮತ ಈ ಮತವಲ್ಲ, ಮನುಜ ಮತ. ಆ ಪಥ ಈ ಪಥವಲ್ಲ, ವಿಶ್ವಪಥ ಎಂದು ಸಾರಿದ್ದಾರೆ ಎಂದು ಶ್ರೀಗಳು ನುಡಿದರು.

ಉಪನ್ಯಾಸಕರಾಗಿ ಆಗಮಿಸಿದ ಗದುಗಿನ ಎ.ಎಸ್. ಎಸ್. ವಾಣಿಜ್ಯ ಮಹಾವಿದ್ಯಾಲಯದ ಕನ್ನಡ ಉಪನ್ಯಾಸಕ ಬಾಹುಬಲಿ ಜೈನರ ಮಾತನಾಡುತ್ತಾ, ಕುವೆಂಪು ಶ್ರೇಷ್ಠ ಕವಿ. ಅಧ್ಯಾತ್ಮಿಕ, ನಿಸರ್ಗ, ವೈಚಾರಿಕ ಕವಿ. ಹತ್ತು ಹಲವು ಪ್ರಕಾರಗಳಲ್ಲಿ ಸಾಹಿತ್ಯ ರಚನೆ ಮಾಡಿ ವಿಶಿಷ್ಟವಾದ ವಿಶ್ವಮಾನವ ಸಂದೇಶ ಕೊಟ್ಟಿದ್ದಾರೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಪೂಜಿ ಪಾಲ್ಗೊಂಡು ಮಾತನಾಡಿದರು. ಪ್ರದೀಪ ಅರ್ಕಸಾಲಿ ಹಗರಿಬೊಮ್ಮನಹಳ್ಳಿ ಇವರು ವಾಯೋಲಿನ್ ನುಡಿಸಿದರು. ಪ್ರಸಾದ ಸುತಾರ ಸಂಗೀತ ಸೇವೆ ನಡೆಸಿಕೊಟ್ಟರು. ಧರ್ಮಗ್ರಂಥ ಪಠಣವನ್ನು ಧನುಷ್ಯ ಎಂ.ಮಳಗಲಿ ಹಾಗೂ ವಚನ ಚಿಂತನವನ್ನು ಕೃತಿಕಾ ಎಸ್.ಅರಸಿದ್ದಿ ನಡೆಸಿಕೊಟ್ಟರು.

ದಾಸೋಹ ಸೇವೆಯನ್ನು ರತ್ನಕ್ಕ ಬಸನಗೌಡ ಪಾಟೀಲ್, ಅವಿನಾಶ ಮತ್ತು ಅಭಿಲಾಶ ಇವರ ಹುಟ್ಟುಹಬ್ಬದ ಪ್ರಯುಕ್ತ ವಿದ್ಯಾ ಪ್ರಭು ಗಂಜಿಹಾಳ ವಹಿಸಿಕೊಂಡಿದ್ದರು. ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಉಪಾಧ್ಯಕ್ಷ ಉಮೇಶ್ ಪುರದ, ವಿದ್ಯಾ ಪ್ರಭು ಗಂಜಿಹಾಳ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ ಉಪಸ್ಥಿತರಿದ್ದರು.

ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ಶಿವಾನಂದ ಹೊಂಬಳ ಕಾರ್ಯಕ್ರಮ ನಿರೂಪಿಸಿದರು.



ಡಾ. ಎಸ್.ಎಸ್. ಉಪ್ಪಿನ ಧಾರವಾಡ ಇವರ ಸ್ಮರಣಾರ್ಥ ಸೋಮಶೇಖರ ಮುನವಳ್ಳಿ ಯು.ಎಸ್.ಎ. ಕೊಡಮಾಡುವ ಮಾಧ್ಯಮ ಪ್ರಶಸ್ತಿಯನ್ನು ಪತ್ರಕರ್ತೆ ಕೀರ್ತನಾ ಕುಮಾರಿ ಕೆ. ಬೆಳಗಾವಿ ಇವರಿಗೆ ಮತ್ತು ಮಾತೋಶ್ರೀ ವೀರಮ್ಮ ನಾಗಪ್ಪ ಮುನವಳ್ಳಿ ಇವರ ಸ್ಮರಣಾರ್ಥ ಸಮಾಜ ಸೇವಿಕಾ ಪ್ರಶಸ್ತಿಯನ್ನು ಶಿಕ್ಷಕಿ ಶಹನಾಜ ಬೇಗಂ ಸಲೀಂ ಅಣ್ಣಿಗೇರಿ ಇವರಿಗೆ ಪ್ರದಾನ ಮಾಡಲಾಯಿತು.

# ರಾಷ್ಟ್ರಮಟ್ಟದ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಆಸ್ಪೈರ್ ಸ್ಪೋರ್ಟ್ಸ್ ಕರಾಟೆ ಅಕಾಡೆಮಿಯಲ್ಲಿ ನಡೆದ ರಾಷ್ಟ್ರಮಟ್ಟದ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಗದಗ ಜಿಲ್ಲೆಯ ಚೇತನ ಕರಾಟೆ ಕ್ಲಬ್‌ನ ಕ್ರೀಡಾಪಟುಗಳು ಭಾಗವಹಿಸಿ ಪದಕಗಳೊಂದಿಗೆ ವಿಜೇತರಾಗಿ ಉತ್ತಮ ಸಾಧನೆಗೈದಿದ್ದಾರೆ.

ಹುಬ್ಬಳ್ಳಿಯ ಗೋಕುಲ ರಸ್ತೆಯ ವಾಸವಿ ಮಹಲ್‌ನಲ್ಲಿ ಹಮ್ಮಿಕೊಂಡ ರಾಷ್ಟ್ರಮಟ್ಟದ ಕರಾಟೆ ಚಾಂಪಿಯನ್ ಶಿಪ್‌ನಲ್ಲಿ ಕರ್ನಾಟಕ, ಮಹಾರಾಷ್ಟ್ರ, ಆಂಧ್ರಪ್ರದೇಶ, ಕಲ್ಕತ್ತಾ ಸೇರಿ ಎಂಟು ರಾಜ್ಯಗಳಿಂದ ಕ್ರೀಡಾಪಟುಗಳು ಭಾಗವಹಿಸಿದ್ದರು. ಇದರಲ್ಲಿ ಗದಗ ಜಿಲ್ಲೆಯ ಚೇತನ ಕರಾಟೆ ಕ್ಲಬ್‌ನ ವಿದ್ಯಾರ್ಥಿಗಳು ಭಾಗವಹಿಸಿ ಪದಕಗಳನ್ನು ಪಡೆದಿದ್ದಾರೆ.

ವಿದ್ಯಾರ್ಥಿಗಳಾದ ವೇದಸಾಯಿ ಪೋಪ್ತಿ–ಕಟಾ, ಕುಮಟೆ (ಪ್ರಥಮ), ಯಜ್ಞಸಾಯಿ ಪೋಪ್ತಿ–ಕಟಾ (ದ್ವಿತೀಯ), ಸಾನ್ವಿ ಪೂಜಾರ–ಕಟಾ (ಪ್ರಥಮ), ಕುಮಟೆ (ತೃತೀಯ), ಅನುಷಾ ಪಾಲನಕರ–ಕಟಾ(ಪ್ರಥಮ), ಕುಮಟೆ (ದ್ವಿತೀಯ), ಕುಶಾಲ ವೇರ್ಣೇಕರ–ಕಟಾ (ದ್ವಿತೀಯ), ಚಿರಂತ ಗೌಡರ–ಕಟಾ (ದ್ವಿತೀಯ), ವಿಜಯ ಗುಡ್ಡಿಮಠ–ಕಟಾ (ದ್ವಿತೀಯ), ಕುಮಟೆ (ಪ್ರಥಮ), ಗಜಾನನ ಎಸ್–ಕಟಾ (ದ್ವಿತೀಯ) ಕುಮಟೆ (ತೃತೀಯ), ಪ್ರಿಯಾಂಕ ನಂದಪ್ಪನವರ–ಕಟಾ (ತೃತೀಯ), ಕುಮಟೆ (ತೃತೀಯ), ಸುಜಿತ ನಂದಪ್ಪನವರ–ಕಟಾ (ದ್ವಿತೀಯ), ಸುಮೀತ ಬಂಕಾಪುರ–ಕಟಾ (ಪ್ರಥಮ), ಕುಮಟೆ ದ್ವಿತೀಯ, ಗಣೇಶ ದೇವರಡ್ಡಿ–ಕಟಾ (ದ್ವಿತೀಯ), ಕುಮಟೆ (ಪ್ರಥಮ), ಮೀನಾಕ್ಷಿ ದೇವರಡ್ಡಿ–ಕಟಾ, ಕುಮಟೆ (ಪ್ರಥಮ), ಚರಂತಗೌಡ–ಕಟಾ, ಕುಮಟೆ (ಪ್ರಥಮ), ಸಮರ್ಥ ಬೆಲ್ಲದ–ಕಟಾ (ಪ್ರಥಮ), ಮಹಮ್ಮದಗೌಸ ಎಲಿಗಾರ–ಕಟಾ (ತೃತೀಯ), ಆಕಾಶ ಸಿಮಿಕೇರಿ–ಕಟಾ, ಕುಮಟೆ (ಪ್ರಥಮ), ಮಿಥುನ ಬಾರಕೇರ–ಕಟಾ (ದ್ವಿತೀಯ), ಕುಮಟೆ (ತೃತೀಯ), ಅನಿರುದ್ಧ ಯಾದವ–ಕಟಾ (ದ್ವಿತೀಯ), ಕುಮಟೆ (ಪ್ರಥಮ), ಅಬುರಿಯನ್ ಹುಲ್ಯಲ್–ಕಟಾ, ಕುಮಟೆ (ತೃತೀಯ), ಸೋಹಿಲ್ ಹಾಲಕೇರಿ–ಕಟಾ (ತೃತೀಯ) ಬಹುಮಾನ ತಮ್ಮದಾಗಿಸಿಕೊಂಡಿದ್ದಾರೆ.

ತರಬೇತಿ ನೀಡಿದ ಗದಗ ಜಿಲ್ಲೆಯ ಮುಖ್ಯ ತರಬೇತುದಾರರಾದ ಪರಶುರಾಮ ಹಬೀಬ ಹಾಗೂ ಪಾಲಕರು ವಿಜೇತ ವಿದ್ಯಾರ್ಥಿಗಳಿಗೆ ಹಾಗೂ ಚೇತನ ಕರಾಟೆ ಕ್ಲಬ್‌ನ ತರಬೇತುದಾರಾದ ಚೇತನ ಹಬೀಬ, ಶಿವರಾಜ ಗಾಡದ, ಗಂಗಪ್ಪ ಸಾಸ್ವಿಹಳ್ಳಿ, ದ್ಯಾಮಪ್ಪ ಹಾವೇರಿ, ಜ್ಯೋತಿಕಾ ಕುರಗೋಡ, ಖುಷಿ ವೇರ್ಣೇಕರ ಇವರುಗಳನ್ನು ಅಭಿನಂದಿಸಿದ್ದಾರೆ.




### ಕರ್ನಾಟಕ ರಾಜ್ಯ ದೇವದಾಸಿ ಮಹಿಳೆಯರ ವಿಮೋಚನಾ ಸಂಘದಿಂದ ಮುಖ್ಯಮಂತ್ರಿಗಳಿಗೆ ಮನವಿ

# ಮರುಗಣತಿಯನ್ನು ಮನೆ ಮನೆಗೆ ತೆರಳಿ ನಡೆಸಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ದೇವದಾಸಿ ಮಹಿಳೆಯರ ಮರುಗಣತಿಯನ್ನು ಮನೆ ಮನೆಗೆ ತೆರಳಿ ನಡೆಸಲು ಕರ್ನಾಟಕ ರಾಜ್ಯ ದೇವದಾಸಿ ಮಹಿಳೆಯರ ವಿಮೋಚನಾ ಸಂಘದ ವತಿಯಿಂದ ತಹಸೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಗೌರವಾಧ್ಯಕ್ಷ ಬಾಲು ರಾಠೋಡ ಮಾತನಾಡಿ, ಕಳೆದ ಎರಡು–ಮೂರು ದಶಕಗಳಿಂದ ಕರ್ನಾಟಕ ರಾಜ್ಯ ದೇವದಾಸಿ ಮಹಿಳೆಯರ ವಿಮೋಚನಾ ಸಂಘದ ನೇತೃತ್ವದಲ್ಲಿ ಹಾಗೂ ದೇವದಾಸಿ ಮಹಿಳೆಯರ ನಿರಂತರ ಮನವಿ, ಒತ್ತಾಯದ ಮೇರೆಗೆ ರಾಜ್ಯ ಸರಕಾರ ತಡವಾಗಿಯಾದರೂ ಸಕಾರಾತ್ಮಕವಾಗಿ ಸ್ಪಂದಿಸಿ ದೇವದಾಸಿ ಮಹಿಳೆಯರ ಕುಟುಂಬದ ಮರುಗಣತಿಗೆ ಮುಂದಾಗಿರುವುದನ್ನು ಕರ್ನಾಟಕ ರಾಜ್ಯ ದೇವದಾಸಿ ಮಹಿಳೆಯರ ವಿಮೋಚನಾ ಸಂಘವು ಸ್ವಾಗತಿಸುತ್ತದೆ.

ಆದರೆ, ಮರು ಗಣತಿಯನ್ನು ದೇವದಾಸಿ ಮಹಿಳೆಯರ ಮನೆಮನೆಗೆ ತೆರಳಿ ಮಾಡುವಂತೆ ಅಗತ್ಯ ಕ್ರಮವಹಿಸಬೇಕು. ಈ ಹಿಂದೆ ಇಂತಹ ಗಣತಿಗಾಗಿ ತೊಡಗಿಸಿಕೊಂಡ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಂಗನವಾಡಿ ನೌಕರರ ಮೂಲಕ ಗಣತಿಗೆ ಕ್ರಮ ವಹಿಸುವಂತೆ ಈ ಮೂಲಕ ಸರ್ಕಾರಕ್ಕೆ ಮನವಿ ನೀಡಿ ಒತ್ತಾಯಿಸುತ್ತೇವೆ.

ಇಡೀ ದೇವದಾಸಿ ಮಹಿಳೆಯರ ಕುಟುಂಬದ ಎಲ್ಲ ಸದಸ್ಯರು ಈ ಗಣತಿಗೆ ದೊರೆಯುಬೇಕಾದುದರಿಂದ ಅವರೆಲ್ಲರನ್ನು ಬೇರೊಂದು ಸ್ಥಳಗಳಿಗೆ ಕರೆಸಿ ಗಣತಿಗೆ ಮಾಡುವುದು ಆ ಕುಟುಂಬಗಳಿಗೆ ತೊಂದರೆದಾಯಕವಾಗಿದೆ. ಈ ಅಂಶಗಳನ್ನು ಗಂಭೀರವಾಗಿ ಪರಿಗಣಿಸಿ, ಅಂಗನವಾಡಿ ಕಾರ್ಯಕರ್ತರಿಗೆ ತರಬೇತಿ ನೀಡಿ ಅವರ ಮೂಲಕವೇ ಮನೆ ಮನೆಗೆ ತೆರಳಿ ದೇವದಾಸಿ ಮಹಿಳೆಯರ ಮನೆಯೆದುರೇ ಗಣತಿ ಮಾಡುವುದು ಸೂಕ್ತವಾಗಿದೆ ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಹುಲಗೆಮ್ಮ ಮಾತಿನ, ತಾಲೂಕು ಅಧ್ಯಕ್ಷರಾದ ದುರಗವ್ವ ಮಾದರ, ಮುಖಂಡರಾದ ಮಲ್ಲಿಕಾರ್ಜುನ ಮಾದರ, ಚಂದ್ರು ಹಾದಿಮನಿ, ಕಿಟ್ಟವ್ವ ಮಾದರ, ಕೇಶವ್ವ ಮಾದರ, ಕಳಕವ್ವ ಕೋತಬಾಳ, ಶಾಂತವ್ವ ಮಾದರ, ಕಸ್ತೂರವ್ವ ಮಾದರ, ಶಿವವ್ವ ಮಾದರ, ರೋಣವ್ವ ಮಾದರ, ಮರಿಯವ್ವ ಮೇಲಿನಮನಿ, ಶೇಕವ್ವ ಕರಡಿ, ಬಸವ್ವ ಚಿಕ್ಕಾಡಿ, ಹನಮವ್ವ ಹುನಗುಂದ, ಬೀಮವ್ವ ಹಾದಿಮನಿ, ದೇವಕ್ಕ ಬನ್ನಿಹಟ್ಟಿ ಮುಂತಾದವರು ಹಾಜರಿದ್ದರು.






ಗದುಗಿನ ಮಹಿಳಾ ಉದ್ಯಮಿ ಮಹೇಶ್ವರಿ ವಿವಿಧೋದ್ದೇಶಗಳ ಮಹಿಳಾ ಮಂಡಳದ ಅಧ್ಯಕ್ಷೆ ಹಾಗೂ ಸರ್ಕಾರದ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ವಿಜೇತೆ ಜಯಶ್ರೀ ಬಸಯ್ಯ ಹಿರೇಮಠ ಅವರಿಗೆ ಮೆಕ್ಸಿಕೋದ ಯುನಿವರ್ಸಿಟಿ ಆಫ್ ಟೋಲೋಸಾ ಗೌರವ ಡಾಕ್ಟರೇಟ್ ನೀಡಿ ಗೌರವಿಸಿದೆ. ಮಹಿಳಾ ಉದ್ದಿಮೆದಾರರಿಗೆ ಮಾರ್ಗದರ್ಶನ, ತರಬೇತಿ, ಮಹಿಳಾ ಸಂಘಟನೆ, ಮಹಿಳಾ ಉದ್ದಿಮೆದಾರರನ್ನು ಪ್ರೋತ್ಸಾಹಿಸಿರುವದನ್ನು ಅವಲೋಕಿಸಿ ಜಯಶ್ರೀ ಅವರ ಜೀವಮಾನ ಸಾಧನೆಗೆ ಗುಲ್ಬರ್ಗಾದಲ್ಲಿ ನಡೆದ ಸಮಾರಂಭದಲ್ಲಿ ಗೌರವ ಡಾಕ್ಟರೇಟ್ ನೀಡಿ ಗೌರವಿಸಲಾಯಿತು.

# 39ನೇ ವಾರ್ಷಿಕ ರಾಷ್ಟ್ರೀಯ ಸಂಶೋಧನಾ ಸಮ್ಮೇಳನ

▶▶ ಮೊದಲನೇ ಪುಟದಿಂದ

ಸಹಕಾರ ರತ್ನ ಪ್ರಶಸ್ತಿಗೆ ಭಾಜನರಾದ ಹಿರಿಯ ಸಹಕಾರಿ ಕೆ.ಎಲ್. ಪಾಟೀಲ್, ಪಿ.ಎಲ್.ಡಿ. ಬ್ಯಾಂಕ್‌ನ ಗುರಣ್ಣಾ ಬಳಗಾನೂರ, ಟಿ.ಎಂ.ಎಸ್. ಅಧ್ಯಕ್ಷರು ಹಾಗೂ ವಕೀಲರಾದ ಆರ್.ಎಮ್. ಹೆಗ್ಡೆ, ಮರ್ಚಂಟ್ ಲಿಬರಲ್ ಕೋ–ಆಪರೇಟಿವ್ ಬ್ಯಾಂಕ್‌ನ ಅಧ್ಯಕ್ಷ ಮೋಹನ ಕೋಟಿ ಸಹಕಾರ ಕ್ಷೇತ್ರಕ್ಕೆ ನೀಡಿದ ವಿಶಿಷ್ಟ ಕೊಡುಗೆಯನ್ನು ಗುರುತಿಸಿ ಸನ್ಮಾನಿಸಲಾಗುವುದು.

ಎರಡು ದಿನಗಳ ಈ ಸಮ್ಮೇಳನದಲ್ಲಿ ದೇಶದ ವಿವಿಧ ರಾಜ್ಯಗಳಿಂದ 200ಕ್ಕೂ ಅಧಿಕ ಸಹಕಾರಿಗಳು, ಶಿಕ್ಷಣ ತಜ್ಞರು, ಸಂಶೋಧಕರು, ವಿದ್ಯಾರ್ಥಿಗಳು, ವಿಶ್ವವಿದ್ಯಾಲಯದ ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿ ಸಂಶೋಧನಾ ಲೇಖನಗಳನ್ನು ಮಂಡಿಸಲಿದ್ದಾರೆ.

ಈ ಸಮ್ಮೇಳನದಲ್ಲಿ ಪ್ರಮುಖ ಸಹಕಾರಿ ಸಂಸ್ಥೆಗಳು ಪ್ರದರ್ಶನ ಮಳಿಗೆಗಳನ್ನು ತೆರೆಯಲಿವೆ. ಕ.ರಾ.ಸೌ.ಸಂ.ನಿ ಬೆಂಗಳೂರು ಅಧ್ಯಕ್ಷ ಜಿ. ನಂಜನಗೌಡ, ಗದಗ ಕ.ರಾ.ಗ್ರಾ ಮತ್ತು ಪಂ. ರಾ.ವಿಶ್ವವಿದ್ಯಾಲಯದ ರೆಜಿಸ್ಟ್ರಾರ್ ಡಾ. ಸುರೇಶ ನಾಡಗೌಡರ, ಕ.ರಾ.ಸೌ.ಸಂ.ನಿ, ಬೆಂಗಳೂರು ವ್ಯವಸ್ಥಾಪಕ ನಿರ್ದೇಶಕ ಶರಣಗೌಡ ಪಾಟೀಲ್, ಹಣಕಾಸು ಅಧಿಕಾರಿ ಪ್ರಶಾಂತ ಜೆ.ಸಿ. ಹಾಗೂ ಇತರ ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

### ಜಲ ಮಂತ್ರಾಲಯದ ನೀತಿ ಆಯೋಗ ರಾಷ್ಟ್ರೀಯ ಟಾಸ್ಕ್ ಫೋರ್ಸ್ ಸಮಿತಿ ರಚನೆ

# ವಾಲ್ಮಿ ನಿರ್ದೇಶಕ ಡಾ. ರಾಜೇಂದ್ರ ಪೋದ್ದಾರ ನೇಮಕ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ವಿಜಯಸಾಕ್ಷಿ ಸುದ್ದಿ, ಕೇಂದ್ರ ಸರ್ಕಾರದ ಜಲಶಕ್ತಿ ಮಂತ್ರಾಲಯ, ಜಲ ಸಂಪನ್ಮೂಲ ಇಲಾಖೆ ನೀತಿ ಆಯೋಗವು ಸದಸ್ಯರ ಅಧ್ಯಕ್ಷತೆಯಲ್ಲಿ ದೇಶದ ವಿವಿಧ ಸಂಘ, ಸಂಸ್ಥೆಗಳು ಹಾಗೂ ಇಲಾಖೆಗಳ ಕಾರ್ಯದರ್ಶಿಗಳು, ಅಧ್ಯಕ್ಷರು, ನಿರ್ದೇಶಕರು ಮತ್ತು ವಿಷಯ ತಜ್ಞರನ್ನು ಒಳಗೊಂಡ ಸಮಗ್ರ ಜಲ ಸಂಪನ್ಮೂಲ ಅಭಿವೃದ್ಧಿ ಮತ್ತು ನಿರ್ವಹಣೆ ಕುರಿತು ರಾಷ್ಟ್ರೀಯ ಟಾಸ್ಕ್ ಫೋರ್ಸ್ ಸಮಿತಿಯನ್ನು ರಚಿಸಿದೆ.

ಈ ಸಮಿತಿಗೆ ಧಾರವಾಡದ ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆಯ ನಿರ್ದೇಶಕರಾದ ಡಾ. ರಾಜೇಂದ್ರ ಪೋದ್ದಾರ ಅವರನ್ನು ನೇಮಿಸಲಾಗಿದೆ. ರಾಷ್ಟ್ರೀಯ ಟಾಸ್ಕ್ ಫೋರ್ಸ್ ಸಮಿತಿಯ ಅವಧಿ ಎರಡು ವರ್ಷಗಳದ್ದಾಗಿದ್ದು, ಸಮಿತಿಯು ಸಮಗ್ರ ಜಲ ಸಂಪನ್ಮೂಲ ಅಭಿವೃದ್ಧಿ ಮತ್ತು ನಿರ್ವಹಣೆ ಸಂಬಂಧಿಸಿದಂತೆ ವರದಿಯನ್ನು ಸಿದ್ದಪಡಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಿದೆ.



ಟಾಸ್ಕ್ ಫೋರ್ಸ್ ಸಮಿತಿಯ ಮುಖ್ಯ ಜವಾಬ್ದಾರಿ ದೇಶದ ನದಿ, ಕೊಳ್ಳಗಳ, ಜಲ ಸಂಪನ್ಮೂಲ ಲಭ್ಯತೆ ಹಾಗೂ ಬಳಕೆಯ ಅಧ್ಯಯನ, ಸಮಗ್ರ ಜಲ ಸಂಪನ್ಮೂಲ ನಿರ್ವಹಣೆಗಾಗಿ ನೀಲ ನಕ್ಷೆ ಸಿದ್ಧಪಡಿಸುವುದು, ಸಮರ್ಪಕ ಜಲ ನಿರ್ವಹಣೆಗೆ ನೀತಿ ನಿರೂಪಣೆ, ಜಲ ನಿರ್ವಹಣೆ ಕುರಿತು. ಸಂಶೋಧನೆ, ಅಭಿವೃದ್ಧಿ ಹಾಗೂ ಅವಶ್ಯಕ ಬಂಡವಾಳ ಹೂಡಿಕೆ ಕುರಿತು ಸಲಹೆಗಳನ್ನು ನೀಡುವುದಾಗಿದೆ. ಸಮಿತಿಯು ವಿವಿಧ ಅಧ್ಯಯನಗಳನ್ನು ಕೈಗೊಂಡು ಜಲ ಸಂಪನ್ಮೂಲ ಕುರಿತಂತೆ ನೀತಿ–ನಿರೂಪಕ ಅಂಶಗಳು, ಸುಧಾರಣೆಗಳು, ಸಾಮರ್ಥ್ಯ ವರ್ಧನೆ, ತಂತ್ರಜ್ಞಾನ ಅಳವಡಿಕೆ ಕುರಿತು ಸಮಗ್ರ ವರದಿಯನ್ನು ಸಲ್ಲಿಸಲಿದೆ.

ಧಾರವಾಡದ ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆಯ ನಿರ್ದೇಶಕರನ್ನು ಸದರಿ ಸಮಗ್ರ ಜಲ ಸಂಪನ್ಮೂಲ ಅಭಿವೃದ್ಧಿ ಮತ್ತು ನಿರ್ವಹಣೆಯ ರಾಷ್ಟ್ರೀಯ ಟಾಸ್ಕ್ ಫೋರ್ಸ್ ಸಮಿತಿಯ ಸದಸ್ಯರಾಗಿ ನೇಮಿಸಿರುವುದು ವಾಲ್ಮಿ ಸಂಸ್ಥೆಗೆ ಸಂದ ಗೌರವಾಗಿದೆ.

ವಾಲ್ಮಿ ಸಂಸ್ಥೆಯು ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಳ್ಳಲು ಸಹಾಯ–ಸಹಕಾರ ನೀಡಿದ ಕರ್ನಾಟಕ ಸರ್ಕಾರ, ಜಲ ಸಂಪನ್ಮೂಲ ಇಲಾಖೆ, ವಾಲ್ಮಿ ಸಿಬ್ಬಂದಿ ಹಾಗೂ ರೈತ ಸಮುದಾಯಕ್ಕೆ ಕೃತಜ್ಞತೆಯನ್ನು ವಾಲ್ಮಿ ಸಂಸ್ಥೆಯು ಪ್ರಕಟಣೆಯಲ್ಲಿ ತಿಳಿಸಿದೆ.

## ಅನಿತಾರಿಗೆ ಪಿಎಚ್‌ಡಿ ಪದವಿ



■ ವಿಜಯಸಾಕ್ಷಿ ಸುದ್ದಿ, ವಿಜಯಪುರ

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯವು ಅನಿತಾ ಎಂ ಅವರು 'ಫಿಸಿಯೋಲಾಜಿಕಲ್ ಆ್ಯಂಡ್ ಫಿಸಿಕಲ್ ಪ್ರೊಫೈಲ್ ಆಫ್ ಕಬಡ್ಡಿ ಪ್ಲೇಯರ್ಸ್ ಆಫ್ ಕರ್ನಾಟಕ ಸ್ಟೇಟ್' ಕುರಿತು ಸಲ್ಲಿಸಿದ್ದ ಮಹಾಪ್ರಬಂಧಕ್ಕೆ ಪಿಎಚ್‌ಡಿ ಪದವಿ ನೀಡಿದೆ.

ಅನಿತಾ ಎಂ ಅವರು ದೈಹಿಕ ಶಿಕ್ಷಣ ಅಧ್ಯಯನ ಮತ್ತು ಕ್ರೀಡಾ ವಿಜ್ಞಾನ ವಿಭಾಗದ ಪ್ರೊ. ಡಿ.ಎಮ್. ಜ್ಯೋತಿ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ಕೈಗೊಂಡಿದ್ದರು. ಡಾಕ್ಟರೇಟ್ ಪದವಿ ಪಡೆದಿರುವ ಅನಿತಾ ಅವರನ್ನು ಕುಲಪತಿ ಪ್ರೊ. ಬಿ.ಕೆ. ತುಳಸಿಮಾಲ, ಕುಲಸಚಿವ ಶಂಕರಗೌಡ ಸೋಮನಾಳ, ಮೌಲ್ಯಮಾಪನ ಕುಲಸಚಿವ ಪ್ರೊ. ಎಚ್. ಎಂ. ಚಂದ್ರಶೇಖರ ಅಭಿನಂದಿಸಿದ್ದಾರೆ.


ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಕೊಣ್ಣೂರ – 582206**

ತಾ:ನರಗುಂದ ಜಿ:ಗದಗ

ಪೋ: 9148065146 ಇ–ಮೇಲ್: konnur.nar.gdg@gmail.com

ಸಂ.ಗ್ರಾ.ಪಂಕೊ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ: 26/12/2024

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕೊಣ್ಣೂರ ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ಸಾಮಗ್ರಿ ಪೂರೈಕೆದಾರರಿಂದ ಕಾಮಗಾರಿವಾರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಕಛೇರಿ ಅವಧಿಯಲ್ಲಿ ಖುದ್ದಾಗಿ ಖಾಲಿ ಟೆಂಡರ್ ಫಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ ಮೊತ್ತ | ಖಾಲಿ ಟೆಂಡರ್ ಫಾರ್ಮ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1. | ಕೊಣ್ಣೂರ ಗ್ರಾಮದ ಶೇಖರಗೌಡ ಪಾಟೀಲ ಇವರ ಮನೆಯಿಂದ ಮುಖ್ಯ ರಸ್ತೆಯವರೆಗೆ ಕಾಂಕ್ರೀಟ ರಸ್ತೆ ನಿರ್ಮಾಣ | 190371.21 (Includes Extra charges) | 1000 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 2. | ಕೊಣ್ಣೂರ ಗ್ರಾಮದ 2ನೇ ವಾರ್ಡಿನ ವಾರದವರ ಮನೆಯಿಂದ ಕಲಹಾಳ ರೋಡವರೆಗೆ ಗಟಾರ ನಿರ್ಮಾಣ | 114314.14 (Includes Extra charges) | 1000 | |
| 3. | ಕೊಣ್ಣೂರ ಗ್ರಾಮದ 7ನೇ ವಾರ್ಡಿನ ಮಸೂತಿಮನಿಯವರ ಮನೆಯಿಂದ ಶೇಬನ್ನವರ ಮನೆಯವರೆಗೆ ಗಟಾರ ನಿರ್ಮಾಣ | 144979.48 (Including Extra charges) | 1000 | |
| 4. | ಕೊಣ್ಣೂರ ಗ್ರಾಮದ ಹದ್ಲಿ ಪ್ಲಾಟಿನಲ್ಲಿ ಮೆಟಲಿಂಗ್ ರಸ್ತೆ ನಿರ್ಮಾಣ | 148946.5 (Includes Extra charges) | 1000 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರ್ಮಗಾಗಿ ಅರ್ಜಿ ವಿತರಿಸುವ ದಿನಾಂಕ: **05/01/2025** ರಿಂದ **15/01/2025** ರ ಒಳಗಾಗಿ ಗ್ರಾಮ ಪಂಚಾಯತ ಕಾರ್ಯಾಲಯದ ಕಛೇರಿ ಸಮಯದಲ್ಲಿ ಪಡೆದು ದಿನಾಂಕ: **05/01/2025** ರಿಂದ **15/01/2025** ರೊಳಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಪ್ರತ್ಯೇಕವಾಗಿ ಕಾಮಗಾರಿವಾರು ಗ್ರಾಮ ಪಂಚಾಯತಿ ಕಚೇರಿಗೆ ಸಲ್ಲಿಸುವುದು. ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಮೇಲ್ಕಂಡ ದಿನಾಂಕದೊಳಗೆ ಗ್ರಾಮ ಪಂಚಾಯತ ಕಾರ್ಯಾಲಯ ಕೊಣ್ಣೂರಲ್ಲಿ ಮಾಹಿತಿ ಪಡೆಯಬಹುದಾಗಿದೆ.

**ಸಹಿ/–**
**ಪಂಚಾಯತ ಅಭಿವೃದ್ಧಿ ಅಧಿಕಾರಿಗಳು,**
**ಗ್ರಾಮ ಪಂಚಾಯತ ಕೊಣ್ಣೂರ**

**ಸಹಿ/–**
**ಅಧ್ಯಕ್ಷರು,**
**ಗ್ರಾಮ ಪಂಚಾಯತ ಕೊಣ್ಣೂರ**

**ವಾ.ಸಾ.ಇ/ಗದಗ/510/ದೇಶಪಾಂಡೆಪಬ್ಲಿಸಿಟಿ/2024–25**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka